ಸಂಪುಟ : 10 ಸಂಚಿಕೆ: 98 ಪುಟ : 4+2 ಬೆಲೆ: 3.00 ರವಿವಾರ ಮೇ 18 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 10 Issue : 98 Pages : 4+2 Price : 3.00 Sunday May 18 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಸಹಜ ಶಿವಯೋಗ ಕಾರ್ಯಕ್ರಮ ಇಂದು

■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಮೇ. 18ರಂದು ಬೆಳಿಗ್ಗೆ 7.30 ಗಂಟೆಗೆ ನಡೆಯಲಿರುವ ಬಸವದಳದ 1646ನೇ ಶರಣ ಸಂಗಮದಲ್ಲಿ ಸಹಜ ಶಿವಯೋಗ ಹಾಗೂ 'ತಂದೆ-ತಾಯಿಗಳಿಂದ ಮಕ್ಕಳಿಗೆ ಸಂಸ್ಕಾರ' ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷರಾದ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣೆ ಗಂಗಮ್ಮ ಹೂಗಾರ ಸಹಜ ಶಿವಯೋಗ ನಡೆಸುವರು ಹಾಗೂ ಶರಣ ಎಂ.ಬಿ. ಲಿಂಗಧಾಳ, ಉಪನ್ಯಾಸ ನೀಡುವರು. ಶರಣೆ ಸುವರ್ಣಾಕ್ಕ ಗಾಳಪ್ಪನವರ ಅತಿಥಿಗಳಾಗಿ ಆಗಮಿಸುವರು. ಕಾರಣ ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

## ನಾಳೆ ಗದಗ ಜಿಲ್ಲೆಗೆ ಎಸ್. ಆರ್. ಪಾಟೀಲ

■ ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ರಾಜ್ಯ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಉಪಾಧ್ಯಕ್ಷರಾದ ಎಸ್. ಆರ್.ಪಾಟೀಲ ಅವರು ಮೇ 19 ರಂದು ಗದಗ ಜಿಲ್ಲೆಗೆ ಪ್ರವಾಸ ಕೈಗೊಳ್ಳಲಿದ್ದು ವಿವರ ಇಂತಿದೆ, ಮೇ 19 ರಂದು ಬೆಳಿಗ್ಗೆ 12.30 ಗಂಟೆಗೆ ಗದಗ ಜಿಲ್ಲಾ ಪಂಚಾಯತ್ ಸಭಾಂಗಣದಲ್ಲಿ ಗದಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರೊಂದಿಗೆ ಚರ್ಚೆ ನಡೆಸುವರು. ಸಂಜೆ 4 ಗಂಟೆಗೆ ರಸ್ತೆ ಮೂಲಕ ಲಕ್ಕುಂಡಿ , ಬನ್ನಿಕೊಪ್ಪ, ತಳಕಲ್ ಮಾರ್ಗವಾಗಿ ಕೊಪ್ಪಳಕ್ಕೆ ಪ್ರಯಾಣ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಮುಳಗುಂದ: ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಮುಳಗುಂದ ಪಟ್ಟಣ ಪಂಚಾಯತ್ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ-ಡೇ ಯೋಜನೆಯ ಸ್ವಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ,

ಕನಿಷ್ಠ ಎಸ್‌ಎಸ್‌ಎಲ್‌ಸಿ/ 10 th pass , ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು. 18-45 ವರ್ಷ ವಯೋಮಾನದವರಾಗಿರಬೇಕು.

ಆಸಕ್ತಿ ಇರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಮೇ 31 ರೊಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಭರ್ತಿ ಮಾಡಿ ಮುಖ್ಯಾಧಿಕಾರಿಗಳು ಪಟ್ಟಣ ಪಂಚಾಯತ್ ಮುಳಗುಂದ ಈ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗೆ ಮುಳಗುಂದ ಪಟ್ಟಣ ಪಂಚಾಯತ್ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ..

### ಡಾ. ಬಿ.ಆರ್. ಅಂಬೇಡ್ಕರ್ ಭವನದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿದ ಸಚಿವ ಎಚ್.ಕೆ. ಪಾಟೀಲ

# ವರ್ಷದೊಳಗೆ ಅಂಬೇಡ್ಕರ್ ಭವನ ನಿರ್ಮಾಣವಾಗಲಿ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಪಟ್ಟಣದ ಬಹುದಿನಗಳ ಬೇಡಿಕೆಯಾಗಿದ್ದ ಡಾ. ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣಕ್ಕೆ ಇಂದು ಚಾಲನೆ ನೀಡಲಾಗಿದ್ದು, ಇಂದಿನಿಂದ ಸರಿಯಾಗಿ ಒಂದು ವರ್ಷದ ಅವಧಿಯಲ್ಲಿ ಭವನ ನಿರ್ಮಾಣ ಕಾಮಗಾರಿ ಪೂರೈಸಲು ಏಜೆನ್ಸಿಯವರು ಕ್ರಮ ವಹಿಸಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲ ಹೇಳಿದರು.

ಅವರು ಶನಿವಾರ ಶಿರಹಟ್ಟಿ ಪಟ್ಟಣದಲ್ಲಿ 196.88 ಲಕ್ಷ ರೂ ವೆಚ್ಚದಲ್ಲಿ ಸಮಾಜ ಕಲ್ಯಾಣ ಇಲಾಖೆಯಿಂದ ನಿರ್ಮಾಣಗೊಳ್ಳಲಿರುವ ಡಾ. ಬಿ.ಆರ್. ಅಂಬೇಡ್ಕರ್ ಭವನದ ಕಾಮಗಾರಿಗೆ ಭೂಮಿಪೂಜೆ ನೆರವೇರಿಸಿ ಮಾತನಾಡಿದರು.

ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ನಿರ್ಮಿತಿ ಕೇಂದ್ರದಿಂದ ಈಗಾಗಲೇ ನಿರ್ಮಾಣವಾಗಿರುವ ಸಮುದಾಯ ಭವನಗಳಲ್ಲಿ ಮಾತನಾಡುವಾಗ ಪ್ರತಿಧ್ವನಿಸುತ್ತಿರುವುದರಿಂದ ಕಾರ್ಯಕ್ರಮವನ್ನು ಹೊರಗಡೆ ಮಾಡುವ ಪರಿಸ್ಥಿತಿ ಬಂದಿದೆ. ಶಿರಹಟ್ಟಿಯಲ್ಲಿಯ ಮಹರ್ಷಿ ವಾಲ್ಮೀಕಿ ಭವನವೂ ಇದೇ ಸಮಸ್ಯೆ ಎದುರಿಸುತ್ತಿದೆ. ತಜ್ಞ ಆರ್ಕಿಟೆಕ್ಚರ್ ಸಲಹೆ ಮೇರೆಗೆ ಸುಸಜ್ಜಿತ ಭವನ ನಿರ್ಮಿಸಬೇಕು. ನ್ಯಾಯಾಲಯಕ್ಕೆ ಸೂಕ್ತ ಜಮೀನು ಒದಗಿಸಬೇಕು, ಶಿರಹಟ್ಟಿ ಪಟ್ಟಣದಲ್ಲಿ ಹೆಸ್ಕಾಂ ಉಪವಿಭಾಗ ಸ್ಥಾಪಿಸಬೇಕು, ಶ್ರೀ ಜ.ಫಕೀರೇಶ್ವರ ಮಠಕ್ಕೆ 22 ಕೋಟಿ ರೂ ವೆಚ್ಚದಲ್ಲಿ ರಿಂಗ್ ರೋಡ್ ನಿರ್ಮಿಸುವುದಕ್ಕೆ ಅನುದಾನ ಒದಗಿಸಬೇಕೆಂದು ಸಚಿವ ಎಚ್.ಕೆ. ಪಾಟೀಲರಲ್ಲಿ ಮನವಿ ಮಾಡಿದರು.



ಶಿರಹಟ್ಟಿ ಪಟ್ಟಣದಲ್ಲಿ ಶ್ರೀ ಜ. ಫಕೀರೇಶ್ವರ ಸಂಸ್ಥಾನ ಮಠಕ್ಕೆ ರಾಜ್ಯ ಹೆದ್ದಾರಿಯಿಂದ



ಸಂಪರ್ಕ ಕಲ್ಪಿಸುವ ರಸ್ತೆಯ ಬಗ್ಗೆ ಜ.ಫ. ಸಿದ್ದರಾಮ ಸ್ವಾಮೀಜಿಗಳು ಪ್ರಸ್ತಾಪಿಸಿದ್ದು, ಈ ಬಗ್ಗೆ ಸಂಬಂಧಿಸಿದ ಇಲಾಖೆಯ ಅಧಿಕಾರಿಗಳೊಂದಿಗೆ ಚರ್ಚಿಸಲಾಗುವುದು. ಸಚಿವ ಸತೀಶ ಜಾರಕಿಹೊಳಿ ಅವರೊಂದಿಗೂ ಚರ್ಚೆ ನಡೆಸುವ ಭರವಸೆಯನ್ನು ನೀಡಿದ್ದೇನೆ ಎಂದರಲ್ಲದೆ, ಜಿಲ್ಲೆಯಲ್ಲಿ ಸಮುದಾಯ ಭವನಗಳಿಗೆ ಅಗತ್ಯವಿರುವ ನಿವೇಶನಗಳ ಕುರಿತು ಸಂಪೂರ್ಣ ವಿವರವನ್ನು ನೀಡಬೇಕೆಂದು ಜಿಲ್ಲಾ ಸಮಾಜ ಕಲ್ಯಾಣಾಧಿಕಾರಿಗೆ ಸೂಚನೆ ನೀಡಿದರು. ಶಿರಹಟ್ಟಿ ಪಟ್ಟಣದಲ್ಲಿ ನ್ಯಾಯಾಲಯ ನಿರ್ಮಾಣಕ್ಕೆ ಹೈಕೋರ್ಟ್ ನ್ಯಾಯಾಧೀಶರೊಂದಿಗೆ ಚರ್ಚಿಸಲಾಗುವುದು ಎಂದರು.

ಮಾಜಿ ಶಾಸಕ ರಾಮಣ್ಣ ಲಮಾಣಿ, ಮಾಜಿ ಸಂಸದ ಪ್ರೊ. ಐ.ಜಿ. ಸನದಿ, ಪ.ಪಂ ಅಧ್ಯಕ್ಷೆ ದೇವಕ್ಕ ಗುಡಿಮನಿ, ಕೆಪಿಸಿಸಿ ಪ್ರಧಾನ ಕಾರ್ಯದರ್ಶಿ ಸುಜಾತಾ ದೊಡ್ಡಮನಿ, ಜಿ.ಪಂ ಮಾಜಿ ಅಧ್ಯಕ್ಷ ವಿಶ್ವನಾಥ ಕಪ್ಪತ್ತನವರ, ಹು-ಧಾ ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷ ಶಾಕೀರ ಸನದಿ, ಶಿರಹಟ್ಟಿ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಎಚ್.ಡಿ. ಮಾಗಡಿ, ಸ್ಥಾಯಿ ಸಮಿತಿ ಅಧ್ಯಕ್ಷ ಹೊನ್ನಪ್ಪ ಶಿರಹಟ್ಟಿ, ಪ.ಪಂ ಮಾಜಿ ಅಧ್ಯಕ್ಷ ನಾಗರಾಜ ಲಕ್ಕುಂಡಿ, ಎಸ್.ಎನ್. ಬಳ್ಳಾರಿ, ಮುತ್ತುರಾಜ ಭಾವಿಮನಿ, ಡಿ.ಕೆ. ಹೊನ್ನಪ್ಪನವರ, ಮಂಜುನಾಥ ಘಂಟಿ, ಸಂತೋಷ ಕುರಿ, ಸಂದೀಪ ಕಪ್ಪತ್ತನವರ, ಅಜ್ಜು ಪಾಟೀಲ, ಜಾನು ಲಮಾಣಿ, ಸಂತೋಷ ಕುರಿ, ತಿಪ್ಪಣ್ಣ ಕೊಂಚಿಗೇರಿ, ಮೋಹನ ಗುತ್ತೆಮ್ಮನವರ, ರವಿ ಗುಡಿಮನಿ, ರಂಗಪ್ಪ ಗುಡಿಮನಿ, ಪ್ರಕಾಶ ಗುಡಿಮನಿ, ಸಿಪಿಐ ನಾಗರಾಜ ಮಾಢಳ್ಳಿ, ಪಿಎಸ್ಐ ಚನ್ನಯ್ಯ ದೇವೂರ, ತಾಲೂಕಾ ಸಮಾಜ ಕಲ್ಯಾಣಾಧಿಕಾರಿ ಗೋಪಾಲ ಲಮಾಣಿ, ನಿರ್ಮಿತಿ ಕೇಂದ್ರದ ವಿಜಯ ಯಳಮಲಿ ಮುಂತಾದವರು ಉಪಸ್ಥಿತರಿದ್ದರು.

ಕಾರ್ಯಕ್ರಮಕ್ಕೂ ಮುನ್ನ ಸಚಿವ ಎಚ್.ಕೆ. ಪಾಟೀಲ ಶಿರಹಟ್ಟಿಯ ಶ್ರೀ ಜ. ಫಕೀರೇಶ್ವರ ಸಂಸ್ಥಾನ ಮಠಕ್ಕೆ ತೆರಳಿ ಕರ್ತೃ ಗದ್ದುಗೆಯ ದರ್ಶನ ಪಡೆದು, ಜ.ಫ. ಸಿದ್ದರಾಮ ಸ್ವಾಮೀಜಿ ಮತ್ತು ಉತ್ತರಾಧಿಕಾರಿ ಜ.ಫ. ದಿಂಗಾಲೇಶ್ವರ ಸ್ವಾಮೀಜಿಗಳಿಂದ ಆಶೀರ್ವಾದ ಪಡೆದುಕೊಂಡರು.



### ರಾಷ್ಟ್ರೀಯ ಡೆಂಗೀ ದಿನದ ಅಂಗವಾಗಿ ಜಿಲ್ಲಾ ಮಟ್ಟದ ಜಾಥಾ, ಮಾನವ ಸರಪಳಿ ಪ್ರದರ್ಶನ

# ಸೂಕ್ತ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯಲ್ಲಿ ಡೆಂಗೀ ನಿಯಂತ್ರಣ ಮಾಡಲು ಗುಣಮಟ್ಟದ ಲಾರ್ವಾ ಸಮೀಕ್ಷೆ ಹಾಗೂ ಜ್ವರ ಸಮೀಕ್ಷೆ ಮಾಡಿ ಖಚಿತ ಪ್ರಕರಣಗಳು ಕಂಡುಬಂದಲ್ಲಿ ಸೂಕ್ತ ಚಿಕಿತ್ಸೆ ನೀಡಿ, ಸೂಕ್ತ ಆರೈಕೆ ಹಾಗೂ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಲು ಆರೋಗ್ಯ ಇಲಾಖೆಯ ಅಧಿಕಾರಿಗಳು ಮುಂದಾಗಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಕರೆ ನೀಡಿದರು.

ಗದಗ ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ, ರಾಷ್ಟ್ರೀಯ ಆರೋಗ್ಯ ಅಭಿಯಾನ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ, ಜಿಲ್ಲಾ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ನಗರ ಆರೋಗ್ಯ ಕೇಂದ್ರ ರೆಹಮತ್ ನಗರ ಗದಗ, ಗದಗ-ಬೆಟಗೇರಿ ನಗರಸಭೆ ಇವರ ಸಂಯುಕ್ತ ಆಶ್ರಯದಲ್ಲಿ ಶನಿವಾರ ಗದುಗಿನ ಗಂಗಾಪೂರ ಪೇಟೆಯ ದುರ್ಗಾದೇವಿ ದೇವಸ್ಥಾನ ಹತ್ತಿರ ರಾಷ್ಟ್ರೀಯ ಡೆಂಗೀ ದಿನದ ಅಂಗವಾಗಿ ಹಮ್ಮಿಕೊಂಡಿದ್ದ ಜಿಲ್ಲಾ ಮಟ್ಟದ ಜಾಥಾ ಮತ್ತು ಮಾನವ ಸರಪಳಿ ಪ್ರದರ್ಶನ, ಜನಜಾಗೃತಿ



ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿ ಡಾ. ಹೆಚ್.ಎಲ್ ಗಿರಡ್ಡಿ ಪ್ರಾಸ್ತಾವಿಕವಾಗಿ ಮಾತನಾಡಿ, ಡೆಂಗೀ ನಿವಾರಣೆಗೆ ಸಮುದಾಯದ ಪಾತ್ರ ಮಹತ್ವದಾಗಿದ್ದು, ಈ ನಿಟ್ಟಿನಲ್ಲಿ ಸಾರ್ವಜನಿಕರ ಅಗತ್ಯ ಸಹಕಾರ ದೊರೆತಾಗ ಮಾತ್ರವೇ ಗುರಿ ಸಾಧನೆಯು ಸುಲಭ ಸಾಧ್ಯವಾಗುತ್ತದೆ. ಈ ವರ್ಷದ ಸರ್ಕಾರದ ಘೋಷ ವಾಕ್ಯವಾದ 'ಡೆಂಗೀ ಸೋಲಿಸಲು ಹೆಜ್ಜೆಗಳು: ಪರಿಶೀಲಿಸಿ, ಸ್ವಚ್ಛಗೊಳಿಸಿ, ಮುಚ್ಚಿಡಿ' ಇದಕ್ಕೆ ಉತ್ತೇಜನ ನೀಡೋಣ ಎಂದರು.

ತಾಲೂಕಾ ಆರೋಗ್ಯ ಅಧಿಕಾರಿ (ಪ್ರಭಾರಿ) ಡಾ. ಪ್ರೀತ್ ಖೋನಾ, ಸಹಾಯಕ ಕೀಟಶಾಸ್ತ್ರಜ್ಞರಾದ ಅನ್ನಪೂರ್ಣ ಶೆಟ್ಟರ, ಕಾರ್ಯಕ್ರಮದ ಅನುಷ್ಠಾನ ಅಧಿಕಾರಿಗಳಾದ ಡಾ. ಸ್ವರ್ಷಾ, ಡಿ.ವಾಯ್.ಹೆಚ್.ಇ.ಓ ಪುಷ್ಪಾ ಪಾಟೀಲ, ಡಿ.ವಾಯ್.ಹೆಚ್.ಇ.ಓ ಗೀತಾ, ಇಬ್ರಾಹಿಂ ಮಕಾಂದಾರ, ಆನಂದ ಬದಿ, ಜಿಲ್ಲಾ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣ ಅಧಿಕಾರಿಗಳ ಕಾರ್ಯಾಲಯದ ಸಿಬ್ಬಂದಿಗಳು, ಆಶಾ ಕಾರ್ಯಕರ್ತೆಯರು, ಕ್ಷೇತ್ರ ಮಟ್ಟದ ಅಧಿಕಾರಿಗಳ ವೃಂದ ಹಾಗೂ ಸಿಬ್ಬಂದಿ ವರ್ಗದವರು ಭಾಗವಹಿಸಿದ್ದರು.

ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ರೂಪಸೇನ ಚವ್ಹಾಣ ಸ್ವಾಗತಿಸಿದರು. ಆರೋಗ್ಯ ನಿರೀಕ್ಷಣಾಧಿಕಾರಿ ಅಜಯಕುಮಾರ ಕಲಾಲ ವಂದಿಸಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಜಿಲ್ಲೆಯಲ್ಲಿ ಕ್ರಿಯಾ ಯೋಜನೆ ತಯಾರಿಸಿ ಗುಣಮಟ್ಟದ ಲಾರ್ವಾ ಸಮೀಕ್ಷೆ ಮಾಡಲು ಗ್ರಾಮೀಣ/ಶಹರ ಮಟ್ಟದಲ್ಲಿ ಹೆಚ್ಚಿನ ಕಾರ್ಯನಿರ್ವಹಿಸಿ ಜಿಲ್ಲೆಯಲ್ಲಿ ಸ್ಥಳೀಯವಾಗಿ ಯಾವುದೇ ಡೆಂಗೀ ಪ್ರಕರಣಗಳು ಕಂಡು ಬರದ ಹಾಗೆ ನೋಡಿಕೊಳ್ಳಲು ತಿಳಿಸಿದರು.



'ಆಪರೇಶನ್ ಸಿಂಧೂರ' ಯಶಸ್ವಿಯಾಗಿರುವ ಹಿನ್ನೆಲೆಯಲ್ಲಿ ಭಾರತೀಯ ಯೋಧರಿಗಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ವತಿಯಿಂದ ಏರ್ಪಡಿಸಿದ್ದ ರಕ್ತದಾನ ಶಿಬಿರದಲ್ಲಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿಯ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಹಾಗೂ ಉಪಾಧ್ಯಕ್ಷ ಅಹಮ್ಮದ ಹುಸೇನ ಖಾಜಿ ಸೇರಿದಂತೆ ಕಾಂಗ್ರೆಸ್ ಕಾರ್ಯಕರ್ತರು ಪಾಲ್ಗೊಂಡಿದ್ದರು.

### 'ಸಾಧನಾ ಸಮಾವೇಶ'ದ ಕುರಿತು ಜರುಗಿದ ಪೂರ್ವಭಾವಿ ಸಭೆಯಲ್ಲಿ ಶಾಸಕ ಜಿ.ಎಸ್. ಪಾಟೀಲ

# ಫಲಾನುಭವಿಗಳ ಸಹಭಾಗಿತ್ವ ಅಗತ್ಯ

■ ವಿಜಯಸಾಕ್ಷಿ ಸುದ್ದಿ, ರೋಣ

ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ಮೇ. 20ರಂದು ಎರಡು ವರ್ಷ ಪೂರೈಸಲಿದ್ದು, ಹೊಸಪೇಟೆಯಲ್ಲಿ ನಡೆಯುವ 'ಸಾಧನಾ ಸಮಾವೇಶ'ದಲ್ಲಿ ಮತಕ್ಷೇತ್ರದಿಂದ 20 ಸಾವಿರಕ್ಕೂ ಹೆಚ್ಚು ಫಲಾನುಭವಿಗಳು ಭಾಗವಹಿಸಲಿದ್ದಾರೆ ಎಂದು ರಾಜ್ಯ ಖನಿಜ ಅಭಿವೃದ್ಧಿ ನಿಗಮದ ಅಧ್ಯಕ್ಷರು, ಶಾಸಕರಾದ ಜಿ.ಎಸ್. ಪಾಟೀಲ ಹೇಳಿದರು.

ಅವರು ಶನಿವಾರ ಪಟ್ಟಣದ ಸಾಹಿತ್ಯ ಭವನದಲ್ಲಿ ಸಾಧನಾ ಸಮಾವೇಶದ ಕುರಿತು ಜರುಗಿದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ರಾಜ್ಯ ಸರಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಲಾಭವನ್ನು 1 ಕೋಟಿ 10 ಲಕ್ಷ ಕುಟುಂಬಗಳು ಪಡೆಯುತ್ತಿವೆ. ಇದು ಸಾಮಾನ್ಯ



ಕೆಲಸವಲ್ಲ ಎಂಬುದನ್ನು ನಾವೆಲ್ಲರೂ ಅರಿಯಬೇಕಿದೆ. ಮುಖ್ಯವಾಗಿ ಎರಡು ವರ್ಷದ ಸಮಾವೇಶದಲ್ಲಿ ಲಕ್ಷ ಫಲಾನುಭವಿಗಳಿಗೆ ಸರಕಾರ ಜಾರಿಗೆ ತಂದಿರುವ ಯೋಜನೆಗಳ ಲಾಭವನ್ನು ತಲುಪಿಸಲಿದೆ ಎಂದರು.

ಪಕ್ಷದ ಕಾರ್ಯಕರ್ತರು ಗ್ಯಾರಂಟಿ ಯೋಜನೆಗಳ ಲಾಭಗಳ ಕುರಿತು ಜನರಿಗೆ ಮನವರಿಕೆ ಮಾಡಬೇಕು. ಅಲ್ಲದೆ ಗೃಹಲಕ್ಷ್ಮೀಯಂತಹ ಮಹತ್ವದ ಯೋಜನೆಯಿಂದ ಇಂದು ಲಕ್ಷಾಂತರ ಕುಟುಂಬಗಳು ಆರ್ಥಿಕ ಶಕ್ತಿಯನ್ನು ಪಡೆದುಕೊಂಡಿವೆ. ಗ್ಯಾರಂಟಿ ಯೋಜನೆಗಳಿಂದ ಕುಟುಂಬಕ್ಕೆ ಪ್ರತಿ ತಿಂಗಳು 5ರಿಂದ 6 ಸಾವಿರ ರೂ ಉಳಿತಾಯವಾಗುತ್ತಿದೆ. ಅನೇಕ ಕುಟುಂಬಗಳು ಮಕ್ಕಳ ಶಿಕ್ಷಣಕ್ಕೆ ಹೆಚ್ಚಿನ ಆದ್ಯತೆ ನೀಡುತ್ತಿರುವುದೇ ಇದಕ್ಕೆ ಸಾಕ್ಷಿಯಾಗಿದೆ ಎಂದರು.

ಪಕ್ಷದ ಮುಖಂಡರು, ಕಾರ್ಯಕರ್ತರು ಪಕ್ಷ ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು. ಶೀಘ್ರದಲ್ಲಿಯೇ ತಾ.ಪಂ ಹಾಗೂ ಜಿ.ಪಂ ಚುನಾವಣೆ ಘೋಷಣೆಯಾಗುವ ಲಕ್ಷಣಗಳಿದ್ದು, ಮನೆಮನೆಗೆ ತೆರಳಿ ಕಾಂಗ್ರೆಸ್ ನೇತೃತ್ವದ ಸರಕಾರ ಜಾರಿಗೆ ತಂದಿರುವ ಯೋಜನೆಗಳ ಮಹತ್ವವನ್ನು ಸಾರ್ವಜನಿಕರಿಗೆ ಮನವರಿಕೆ ಮಾಡಿಕೊಡಬೇಕು ಎಂದು ಶಾಸಕ ಜಿ.ಎಸ್. ಪಾಟೀಲ ತಿಳಿಸಿದರು.

ಈ ಸಂದರ್ಭದಲ್ಲಿ ಐ.ಎಸ್. ಪಾಟೀಲ, ವೀರಣ್ಣ ಶೆಟ್ಟರ, ಶರಣಗೌಡ ಪಾಟೀಲ, ರಮೇಶ ಪಲ್ಲೇದ, ಸಿದ್ದಣ್ಣ ಬಂಡಿ, ವಿ.ಆರ್. ಗುಡಿಸಾಗರ, ಎಚ್.ಎಸ್. ಸೋಂಪುರ, ಶಫೀಕ ಮೂಗನೂರ, ಪರಶುರಾಮ ಅಳಗವಾಡಿ, ಅಂದಪ್ಪ ಬಿಚ್ಚೂರ, ಆನಂದ ಚಂಗಳಿ, ಅಸ್ಲಂ ಕೊಪ್ಪಳ, ಸಂಜಯ ದೊಡ್ಡಮನಿ, ಮಂಜುಳಾ ರೇವಡಿ, ನಾಜಬೇಗಂ ಯಲಿಗಾರ ಸೇರಿದಂತೆ ಅನೇಕ ಮುಖಂಡರುಗಳಿದ್ದರು.

ಇದಕ್ಕೂ ಮುನ್ನ ತಾಲೂಕಾ ಮಟ್ಟದ ಅಧಿಕಾರಿಗಳ ಸಭೆ ಆಯೋಜಿಸಲಾಗಿತ್ತು. ಈ ಸಂಧರ್ಭದಲ್ಲಿ ತಹಸೀಲ್ದಾರ ನಾಗರಾಜ ಕೆ ಹಾಗೂ ಕಿರಣಕುಮಾರ ಸಮಾವೇಶದ ಸಿದ್ಧತೆ ಹಾಗೂ ಫಲಾನುಭವಿಗಳನ್ನು ಸಮಾವೇಶಕ್ಕೆ ಕರೆದುಕೊಂಡು ಹೋಗುವ ಕುರಿತು ಶಾಸಕ ಜಿ.ಎಸ್. ಪಾಟೀಲರಿಗೆ ಮಾಹಿತಿ ನಿಡಿದರು. ಕಾರ್ಯಕ್ರಮದ ಯಶಸ್ವಿಗೆ ನೋಡಲ್ ಅಧಿಕಾರಿಗಳನ್ನು ನೇಮಿಸಲಾಗಿದ್ದು, 65 ಬಸ್‌ಗಳ ವ್ಯವಸ್ಥೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

ಕವನ

## ಕಾಲ



ಶುಭ ಕಾಲ ಈ ಕಾಲ
ಯಾವ ಕಾಲ
ರಾಹುಕಾಲ ಯಮಗಂಡಕಾಲ
ಗುಳಿಕಾಲ
ಸಾಯುವನಿಗೇ ಗೊತ್ತಾ
ಯಾವ ಕಾಲ
ಹುಟ್ಟು ಮಗುವಿಗೆ
ತಿಳಿದಿತ್ತ ಈ ಕಾಲ
ಎಲ್ಲಾವು ನಮ್ಮ
ಕಾಲ...
ಆ ವಾರ ಈ ವಾರ
ಯಾವ ವಾರ
ಹಣ ಕೊಡುವುದಕ್ಕೆ
ಈ ವಾರ
ಶುಭ ಅಶುಭಕ್ಕೆ
ಯಾವ ವಾರ
ಜೀವನವು ಹೀಗೆ
ನಾವು ನಡೆಯುವುದು ಹಾಗೆ
ದಿನ ಕಾಲ ಬದಲಾಗಲಿಲ್ಲ
ಈ ಬದಲಾವಣೆಗೆ
ನಾವೇ ಕಾರಣ
ಸುಳ್ಳಿಗೆ ಇದೆ ಬೆಲೆ
ಸತ್ಯಕ್ಕೆ ಇಲ್ಲ ನೆಲೆ
ಬಣ್ಣ ಬಣ್ಣದ ಮಾತಿಗೆ
ಬೆಲೆ ಜಾಸ್ತಿ
ನಾ ಹೀಗೆ ಇರುವೆ
ಸತ್ಯವೇ ಹೇಳುವೆ
ನನ್ನ ಜೀವನವೇ ಹೀಗೆ
ಈ ಮನುಷ್ಯನಿಗೆ ಗೌರವ ಮರ್ಯಾದೆನೇ ಇಲ್ಲವೆ



– ವಿ.ಎಂ.ಎಸ್.ಗೋಪಿ.
ಲೇಖಕರು, ಬೆಂಗಳೂರು.

## ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆ ಸೊರಟೂರ ತಾ: ಜಿ: ಗದಗ ಇಲ್ಲಿ ಎಸ್ ಎಸ್ ಎಲ್ ಸಿ ಉತ್ತೀರ್ಣರಾದವರಿಗೆ ಫಿಟ್ಟರ್ ಮತ್ತು ಎಲೆಕ್ಟ್ರಿಷಿಯನ್ ವೃತ್ತಿಗಳಿಗೆ ಆಗಸ್ಟ್ 2025ನೇ ಸಾಲಿನ ಐ.ಟಿ.ಐ ಪ್ರವೇಶಕ್ಕಾಗಿ ( ಸಿಟಿ ಎಸ್ ವಿಭಾಗ) ಅರ್ಹತೆ ಮತ್ತು ಮೀಸಲಾತಿ ಆಧಾರದ ಮೇಲೆ ( ಮೆರಿಟ್ ಕಮ್ ರಿಸರ್ವೇಷನ್ ) ಆನ್ ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 28 ಕೊನೆಯ ದಿನವಾಗಿರುತ್ತದೆ. ವೆಬ್ ಸೈಟ್ **www.cite.karnataka.gov.in** ವಿಳಾಸದ ಮುಖಾಂತರ ಆನ್ ಲೈನ್ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸೊರಟೂರು, ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯನ್ನು ಸಂಪರ್ಕಿಸಬಹುದಾಗಿದೆ.

### ಜಿಲ್ಲೆಯಲ್ಲಿ ಸದ್ದಿಲ್ಲದೆ ಕ್ಷೀರ ಕ್ರಾಂತಿಗೆ ನಾಂದಿ ಹಾಡಿದ ಜಿಲ್ಲಾ ಪಂಚಾಯಿತಿ । ರಾಸುಗಳ ಖರೀದಿಗೆ ಆರ್ಥಿಕ ಬೆಂಬಲ

# ಹೈನೋದ್ಯಮದ ಆಶಾಕಿರಣ 'ಅಮೃತ-ಸುರಭಿ'


ಮಹಿಳೆಯರ ಆರ್ಥಿಕ ಮತ್ತು ಸಮಾಜಿಕ ಸಬಲೀಕರಣದ ಕನಸಿನೊಂದಿಗೆ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಹಾಗೂ ಜೀವನೋಪಾಯ ಇಲಾಖೆಯಡಿ ಸ್ಥಾಪಿಸಲಾಗಿರುವ 'ಸಂಜೀವಿನಿ' ಯೋಜನೆಯ ಒಕ್ಕೂಟಗಳು ಕಳೆದ ಹತ್ತು ವರ್ಷಗಳಿಂದ ಗದಗ ಜಿಲ್ಲೆಯಲ್ಲಿ ಗ್ರಾಮೀಣ ಮಹಿಳೆಯರ ಬದುಕಿನಲ್ಲಿ ಪರಿವರ್ತನೆಯನ್ನು ತರುವಲ್ಲಿ ಮಹತ್ತರ ಪಾತ್ರವನ್ನು ವಹಿಸುತ್ತಿವೆ. ವಿವಿಧ ಜೀವನೋಪಾಯ ಚಟುವಟಿಕೆಗಳಿಗೆ ವಿಫುಲವಾದ ಅವಕಾಶಗಳನ್ನು ಸೃಷ್ಟಿಸಿ ಮಹಿಳೆಯರ ಬದುಕನ್ನು ಹಸನುಗೊಳಿಸಲು ಒಕ್ಕೂಟಗಳು ನಿರಂತರವಾಗಿ ಶ್ರಮಿಸುತ್ತಿವೆ. ಇದಕ್ಕೆ ಸಾಕ್ಷಿ ಎಂಬಂತೆ ಕಳೆದ ವರ್ಷ ಆಗಸ್ಟ್ ತಿಂಗಳಲ್ಲಿ ಗದಗ ಜಿಲ್ಲೆಯಲ್ಲಿ ಹೈನೋದ್ಯಮಕ್ಕೆ ಒತ್ತು ನೀಡಿ, ಒಂದು ಸಾವಿರಕ್ಕೂ ಹೆಚ್ಚು ಸ್ವ-ಸಹಾಯ ಗುಂಪಿನ ಸದಸ್ಯರಿಗೆ ರಾಸುಗಳ ಖರೀದಿಗೆ ಆರ್ಥಿಕ ಬೆಂಬಲ ನೀಡುವ ಮೂಲಕ ಸದ್ದಿಲ್ಲದೆ ಜಿಲ್ಲೆಯಲ್ಲಿ ಕ್ಷೀರ ಕ್ರಾಂತಿಗೆ ನಾಂದಿ ಹಾಡಲಾಗುತ್ತಿದೆ.

ಗದಗ ಜಿಲ್ಲೆಯಲ್ಲಿ ಬಹುತೇಕ ಮಳೆಯಾಶ್ರಿತ ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಂಡಿರುವ ರೈತಾಪಿ ವರ್ಗಕ್ಕೆ ಕೃಷಿಯ ನಂತರದ ಸ್ಥಾನ ಹೈನುಗಾರಿಕೆಗೆ. ಹೈನೋತ್ಪನ್ನಗಳಾದ ಹಾಲು, ಮೊಸರು, ಬೆಣ್ಣೆ, ತುಪ್ಪ ಮುಂತಾದ ಉತ್ಪನ್ನಗಳನ್ನು ಕುಟುಂಬದ ಉಪಭೋಗಕ್ಕೆ ಬಳಸಿಕೊಳ್ಳುವುದರ ಜೊತೆಗೆ, ಇವುಗಳನ್ನು ಮಾರಾಟ ಮಾಡಿ



ಬದುಕು ಕಟ್ಟಿಕೊಂಡ ಹಲವಾರು ಕುಟುಂಬಗಳನ್ನು ನಾವು ಹಳ್ಳಿಗಳಲ್ಲಿ ನೋಡಬಹುದಾಗಿದೆ. ಹೀಗಾಗಿ ಹೈನುಗಾರಿಕೆ ಎನ್ನುವುದು ಗ್ರಾಮೀಣ ಜನರ, ಅದರಲ್ಲೂ ವಿಶೇಷವಾಗಿ ಮಹಿಳೆಯರ ಬದುಕಿನ ಜೀವನಾಡಿ ಎನ್ನಬಹುದು.

ಹೆಚ್ಚು ರಾಸುಗಳನ್ನು ಸಾಕಿ, ಹೈನೋದ್ಯಮದ ಮೂಲಕ ಜೀವನಮಟ್ಟವನ್ನು ಸುಧಾರಿಸಿಕೊಳ್ಳುವ ತವಕದಲ್ಲಿರುವ ಅದೆಷ್ಟೋ ಕುಟುಂಬಗಳಿಗೆ ಸುಲಭವಾಗಿ ಮತ್ತು ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಸಿಗುವುದು ಕಷ್ಟವೇ ಸರಿ. ಈ ಹಿನ್ನೆಲೆಯಲ್ಲಿ, ಹೈನುಗಾರಿಕೆಯಲ್ಲಿ ತೊಡಗಿಕೊಳ್ಳಲು ಆಸಕ್ತಿಯುಳ್ಳ ಅರ್ಹ ಮಹಿಳೆಯರನ್ನು ಗುರುತಿಸಿ, ಅವರಿಗೆ ಸಾಲ ಸೌಲಭ್ಯ ನೀಡಿ, ಜಿಲ್ಲೆಯಲ್ಲಿ ಹೈನುಗಾರಿಕೆಯನ್ನು ಉತ್ತೇಜಿಸಬೇಕು ಎಂಬ ಉದ್ದೇಶದೊಂದಿಗೆ 'ಅಮೃತ-ಸುರಭಿ' ಎನ್ನುವ ಯೋಜನೆಯನ್ನು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ ನೇತೃತ್ವದ ತಂಡ ಸಿದ್ಧಪಡಿಸಿ ಅನುಷ್ಠಾನಗೊಳಿಸುವಲ್ಲಿ ಯಶಸ್ವಿಯಾಗಿದೆ.



ಹೈನೋದ್ಯಮ ಅಭಿವೃದ್ಧಿಪಡಿಸಲು ಗದಗ ಜಿಲ್ಲಾ ಪಂಚಾಯಿತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಳೆದ ವರ್ಷ ಆಗಸ್ಟ್-2024ರಲ್ಲಿ ಯೋಜನೆಯನ್ನು ರೂಪಿಸಿ, ಜಿಲ್ಲೆಯಲ್ಲಿ 1000 ಕುಟುಂಬಗಳು ಹೈನುಗಾರಿಕೆಯಲ್ಲಿ ತೊಡಗಿಕೊಳ್ಳುವಂತೆ ಮಾಡಬೇಕು ಎನ್ನುವ ಮಹಾತ್ವಾಕಾಂಕ್ಷೆ ಯೋಜನೆಯೊಂದನ್ನು ಸಂಜೀವಿನಿ-ಎನ್.ಆರ್.ಎಲ್.ಎಮ್ ಯೋಜನೆಯ ಮೂಲಕ ಸಿದ್ಧಪಡಿಸಿ ಇದನ್ನು ಸಾಧಿಸಲು ಜನವರಿ-2025ವರೆಗೆ ಸಮಯಾವಕಾಶ ನೀಡಲಾಗಿತ್ತು.

ಆರಂಭದಲ್ಲಿ ಹೈನುಗಾರಿಕೆ ಮಾಡಲು ಆಸಕ್ತರಿರುವ ಸ್ವ-ಸಹಾಯ ಗುಂಪಿನ ಮಹಿಳೆಯರನ್ನು ಗುರುತಿಸಲಾಯಿತು. ಹಸು ಅಥವಾ ಎಮ್ಮೆಗಳನ್ನು ಕೊಂಡುಕೊಳ್ಳಲು ಇವರಿಗೆ ಸಂಜೀವಿನಿ-ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನದಡಿ (ಎನ್.ಆರ್.ಎಲ್.ಎಮ್) ಸ್ಥಾಪಿಸಲಾದ ಗ್ರಾ.ಪಂ ಮಟ್ಟದ ಒಕ್ಕೂಟಗಳ ಮೂಲಕ ಮತ್ತು ಅಗತ್ಯವಿದ್ದಲ್ಲಿ ಬ್ಯಾಂಕ್‌ಗಳ ಮೂಲಕ ಸಾಲ ಸೌಲಭ್ಯವನ್ನು ಕಲ್ಪಿಸಲು ಪೂರ್ವತಯಾರಿ ಮಾಡಿಕೊಳ್ಳಲಾಯಿತು.

ಅದರಂತೆ ತಾಲೂಕುವಾರು ಮತ್ತು ಗ್ರಾಮ ಪಂಚಾಯತವಾರು ಗುರಿ ನಿಗದಿಪಡಿಸಿ ಆರು ತಿಂಗಳ ಒಳಗಾಗಿ ಒಂದು ಸಾವಿರ ಕುಟುಂಬಗಳಿಗೆ

> ಹೈನುಗಾರಿಕೆ ಮಾಡುವ ಕನಸಿತ್ತು. ಸಂಜೀವಿನಿ ಒಕ್ಕೂಟ 50 ಸಾವಿರ ರೂಪಾಯಿ ಸಾಲ ನೀಡಿ ನನಗೆ ಸಹಾಯ ಮಾಡಿತು. ಒಂದು ಆಕಳ ಖರೀದಿ ಮಾಡಿ ಹೈನುಗಾರಿಕೆ ಪ್ರಾರಂಭಿಸಿದೆ. ಒಟ್ಟು 1.5 ಲಕ್ಷ ರೂಗಳ ಸಾಲ ಪಡೆದು ಮೂರು ಹಸುಗಳನ್ನು ಖರೀದಿಸಿದೆ. ಇದರಿಂದ ದಿನಾಲು 16 ಲೀಟರ್ ಹಾಲು ಉತ್ಪನ್ನಗಾಗುತ್ತಿದ್ದು, ನನ್ನ ಕಟುಂಬದ ಆರ್ಥಿಕ ಪರಿಸ್ಥಿತಿ ಸುಧಾರಿಸಲು ಅನುಕೂಲವಾಯಿತು.
>
> **– ವಿಜಯಲಕ್ಷ್ಮಿ ಪಾಟೀಲ್.**
> **ಸ್ವ-ಸಹಾಯ ಗುಂಪಿನ ಮಹಿಳೆ,**
> **ಗೊಜನೂರು ಗ್ರಾಮ.**

ಹೈನುಗಾರಿಕೆಗೆ ಅವಕಾಶ ಕಲ್ಪಿಸುವ 'ಅಮೃತ-ಸುರಭಿ' ಯೋಜನೆಗೆ ಚಾಲನೆ ನೀಡಲಾಯಿತು. ನಂತರ ಹೊಸದಾಗಿ ಹೈನುಗಾರಿಕೆ ಪ್ರಾರಂಭಿಸಿರುವ ಮತ್ತು ಹೈನುಗಾರಿಕೆ ವಿಸ್ತರಣೆ ಮಾಡಿಕೊಂಡಿರುವ ಕುಟುಂಬಗಳೆಷ್ಟು, ಎಷ್ಟು ರಾಸುಗಳನ್ನು ಖರೀದಿಸಲಾಯಿತು, ಎಷ್ಟು ಸಾಲ ಸೌಲಭ್ಯ ಕಲ್ಪಿಸಲಾಗಿದೆ, ಇನ್ನೂ ಎಷ್ಟು ಕುಟುಂಬಗಳನ್ನು ತಲುಪಬೇಕು ಮತ್ತು ಹಾಲು ಉತ್ಪನ್ನದಲ್ಲಾದ ಹೆಚ್ಚಳವೆಷ್ಟು ಎನ್ನುವ ಹಲವಾರು ಸಂಗತಿಗಳ ಕುರಿತು ದತ್ತಾಂಶಗಳನ್ನು ಸಂಗ್ರಹಿಸಿ, ಪ್ರತಿ ತಿಂಗಳೂ ಪ್ರಗತಿ ಪರಿಶೀಲನೆ ಮಾಡುತ್ತಾ ಹೋಗಲಾಯಿತು. ಇದರಿಂದಾಗಿ ಆರು ತಿಂಗಳಲ್ಲಿ 1029 ಕುಟುಂಬಗಳಿಗೆ ಹೈನುಗಾರಿಕೆ ಕಲ್ಪಿಸುವಲ್ಲಿ ಯಶಸ್ಸನ್ನು ಕಾಣಲಾಯಿತು.

ಯೋಜನೆಯ ಒಂದು ಪ್ರಯತ್ನದಿಂದಾಗಿ ಇಂದು ಗದಗ ಜಿಲ್ಲೆಯಲ್ಲಿ ಹೈನೋದ್ಯಮಕ್ಕೆ ಇಂಬು ದೊರೆತಂತಾಗಿದೆ. ಈ ಯೋಜನೆಯ ಅನುಷ್ಠಾನದಿಂದಾಗಿ ಗದಗ ಜಿಲ್ಲೆಯಲ್ಲಿ ಒಟ್ಟು 1029 ಕುಟುಂಬಗಳಿಗೆ ಸಾಲ ಸೌಲಭ್ಯ ಕಲ್ಪಿಸಲಾಗಿದ್ದು, ಈ ಪೈಕಿ ಗ್ರಾ.ಪಂ ಒಕ್ಕೂಟದ ಮೂಲಕ ಸಮುದಾಯ ಬಂಡವಾಳ ನಿಧಿ ರೂ. 4.99 ಕೋಟಿ ಹಾಗೂ ಬ್ಯಾಂಕ್ ಮೂಲಕ ರೂ. 1.66 ಕೋಟಿಗಳಷ್ಟು ಸೇರಿದಂತೆ ಒಟ್ಟು ರೂ. 6.64 ಕೋಟಿ ಸಾಲವನ್ನು ಪಡೆದುಕೊಂಡಿದ್ದು, ಒಟ್ಟು 1256 ರಾಸುಗಳನ್ನು ಖರೀದಿಸಿರುತ್ತಾರೆ. ಇದರಿಂದಾಗಿ ಪ್ರತಿ ದಿನ ಸರಾಸರಿ 3,975 ಲೀಟರ್‌ನಷ್ಟು ಹಾಗೂ ಪ್ರತಿ ತಿಂಗಳು 1,19,250 ಲೀಟರ್‌ನಷ್ಟು ಹಾಲು ಉತ್ಪನ್ನವಾಗುತ್ತಿದೆ. ಹೈನುಗಾರಿಕೆಯಲ್ಲಿ ತೊಡಗಿಕೊಂಡಿರುವ ಈ ಕುಟುಂಬಗಳು ಪ್ರತಿ ತಿಂಗಳು ಒಟ್ಟು ರೂ.35.77 ಲಕ್ಷ ಆದಾಯವನ್ನು ಪಡೆದುಕೊಳ್ಳುತ್ತಿದ್ದಾರೆ.



> ಮಳೆಯಾಶ್ರಿತ ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಂಡಿರುವ ರೈತ ಕುಟುಂಬಗಳಿಗೆ ಹೈನುಗಾರಿಕೆ ಪ್ರೋತ್ಸಾಹಿಸಲು, ಜನವರಿ-2025ರೊಳಗಾಗಿ ಜಿಲ್ಲೆಯಲ್ಲಿ ಒಟ್ಟು 1000 ಕುಟುಂಬಗಳಿಗೆ ಹೈನುಗಾರಿಕೆಗೆ ವಿಸ್ತರಿಸುವ ಉದ್ದೇಶದೊಂದಿಗೆ ಕಳೆದ ವರ್ಷ ಜೂನ್ ತಿಂಗಳಲ್ಲಿ ಅಮೃತ ಸುರಭಿ ಯೋಜನೆ ಪ್ರಾರಂಭಿಸಲಾಯಿತು. ಕೇವಲ ಆರು ತಿಂಗಳುಗಳಲ್ಲಿ 6.64 ಕೋಟಿ ರೂ.ಗಳ ಸಾಲವನ್ನು ಗ್ರಾ.ಪಂ ಮಟ್ಟದ ಒಕ್ಕೂಟಗಳು ಮತ್ತು ಬ್ಯಾಂಕ್‌ಗಳಿಂದ ಮೂಲಕ ಸಾಲ ಸೌಲಭ್ಯ ಒದಗಿಸುವುದರ ಮೂಲಕ ಹಣಕಾಸಿನ ನೆರವು ನೀಡಲು ಕ್ರಮ ಕೈಗೊಳ್ಳಲಾಯಿತು. ಅಮೃತ ಸುರಭಿ ಯೋಜನೆಯ ಯಶಸ್ವಿ ಅನುಷ್ಠಾನದಿಂದ ಪ್ರೇರೇಪಣೆಗೊಂಡು, ಪ್ರಸಕ್ತ ಆರ್ಥಿಕ ವರ್ಷದಲ್ಲೂ ಸಹ 3500 ಕುಟುಂಬಗಳಿಗೆ ಹೈನುಗಾರಿಕೆ ವಿಸ್ತರಿಸಲು ಗುರಿ ಹೊಂದಲಾಗಿದೆ.
>
> **– ಭರತ್.ಎಸ್.**
> **ಜಿ.ಪಂ ಸಿಇಓ, ಗದಗ.**

### ಅಂತರ ವಲಯ ಯುವಜನೋತ್ಸವಕ್ಕೆ ಚಾಲನೆ ನೀಡಿದ ಡಾ. ಶಶಿಧರ ನರೇಂದ್ರ

# ದೊರೆತ ಅವಕಾಶಗಳನ್ನು ಸರಿಯಾಗಿ ಬಳಸಿಕೊಳ್ಳಿ

■ ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ

ಸಾಧನೆ ಮಾಡಲು ವಿದ್ಯಾರ್ಥಿಗಳಿಗೆ ಸಾಕಷ್ಟು ಅವಕಾಶಗಳು ದೊರೆಯುತ್ತವೆ. ಜೀವನದಲ್ಲಿ ದೊರೆಯುವ ಅವಕಾಶಗಳನ್ನು ಸರಿಯಾಗಿ ಬಳಸಿಕೊಳ್ಳಬೇಕು ಎಂದು ಅಖಿಲ ಭಾರತ ಆಕಾಶವಾಣಿಯ ಎ ಗ್ರೇಡ್ ನಾಟಕ ಕಲಾವಿದರಾದ ಡಾ. ಶಶಿಧರ ನರೇಂದ್ರ ಹೇಳಿದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ವತಿಯಿಂದ ಇತ್ತೀಚೆಗೆ ಹಮ್ಮಿಕೊಳ್ಳಲಾಗಿದ್ದ ಅಂತರ ವಲಯ ಯುವಜನೋತ್ಸವ ಸಮಾರಂಭವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಮಕ್ಕಳಿಗೆ ಸಂಸ್ಕಾರ, ಸಂಸ್ಕೃತಿ, ಸಹನೆ, ತಾಳ್ಮೆಯನ್ನು ಮನೆಯಲ್ಲಿ ಹೇಳಿಕೊಡಬೇಕು. ಸಂಸ್ಕಾರ ಕಲಿಸದೇ ಹೋದರೆ



ದುರ್ಘಟನೆಗಳು ಸಂಭವಿಸುತ್ತವೆ. ಸಪ್ತ ಸ್ವರಗಳನ್ನು ಶುದ್ಧವಾಗಿ ಹಾಡಬೇಕಾದರೆ ಕಠಿಣ ಪರಿಶ್ರಮ ಮುಖ್ಯವಾಗುತ್ತದೆ. ಭಾರತವು ಕಲೆಯನ್ನು ಪೋಷಿಸುವ ರಾಷ್ಟ್ರವಾಗಿದೆ. ಮುಕ್ತಿ ಕೊಡುವ ಕಲೆ ನಮ್ಮದಾಗಿದೆ. ವಿಶ್ವಕ್ಕೆ ಸಂಸ್ಕೃತಿಯ ಪಾಠ ಹೇಳಿಕೊಟ್ಟ ದೇಶ ನಮ್ಮದು ಎಂದು ತಿಳಿಸಿದರು.

ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಕುಲಪತಿಗಳಾದ ಡಾ. ಸಿ.ಬಸವರಾಜು ಅಧ್ಯಕ್ಷತೆ ವಹಿಸಿ ಮಾತನಾಡಿ, ಇಂದು ಸಮಾಜ ಒಡೆದು ಹೋಗುತ್ತಿದೆ. ಉತ್ತಮ ಸಮಾಜ ನಿರ್ಮಿಸುವ ಜವಾಬ್ದಾರಿ ನಮ್ಮೆಲ್ಲರ ಮೇಲಿದೆ. ಭಾರತೀಯ ಸಂಸ್ಕೃತಿಯನ್ನು ಬೇರೆ ಬೇರೆ ರಾಷ್ಟ್ರಗಳು ಪಾಲಿಸುತ್ತಿವೆ. ಭರತನಾಟ್ಯ, ಸುಗಮ ಸಂಗೀತ, ನಾಟಕಗಳನ್ನು ಬೇರೆ ರಾಷ್ಟ್ರಗಳು ಅಳವಡಿಸಿಕೊಂಡಿವೆ. ಭಾರತದ ಕಲೆ ವಿಶ್ವದೆಲ್ಲೆಡೆ ವ್ಯಾಪಿಸಿದೆ. ಬುದ್ಧನ ತತ್ವಗಳು ಇಂದಿಗೂ ಸಹ ಅನ್ವಯವಾಗುತ್ತವೆ. ಕಲೆ, ಸಾಹಿತ್ಯ, ಸಂಸ್ಕೃತಿಯ ಕ್ಷೇತ್ರಗಳಲ್ಲಿ ಸಾಧನೆಗೈಯಲು ಪ್ರೀತಿ, ವಾತ್ಸಲ್ಯ ಮುಖ್ಯ ಎಂದು ಅಭಿಪ್ರಾಯಪಟ್ಟರು.

ಕಾರ್ಯಕ್ರಮದಲ್ಲಿ ವಿಶ್ವವಿದ್ಯಾಲಯದ ಆಡಳಿತಾಂಗ ಕುಲಸಚಿವರಾದ ಗೀತಾ ಈ.ಕೌಲಗಿ, ಹಣಕಾಸು ಅಧಿಕಾರಿಗಳಾದ ಸಂಜೀವಕುಮಾರ ಸಿಂಗ್, ವಿದ್ಯಾರ್ಥಿ ಕ್ಷೇಮಾಭಿವೃದ್ಧಿ ವಿಭಾಗದ ನಿರ್ದೇಶಕರಾದ ಡಾ. ಗಿರೀಶ್ ಕೆ.ಸಿ, ವಿಶ್ವವಿದ್ಯಾಲಯದ ಪ್ರಾಧ್ಯಾಪಕರು, ಸಿಬ್ಬಂದಿ, ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

ಚನ್ನಮ್ಮ ಮಠದ ನಿರೂಪಿಸಿದರು. ಪ್ರಮತಿ ಪ್ರಾರ್ಥಿಸಿದರು. ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ನಾಡಗೀತೆಯನ್ನು ಹಾಡಿದರು. ರೀಮಾ ಎಂ ಸ್ವಾಗತಿಸಿದರು. ಭೂಮಿಕಾ ತಂಡಗಳನ್ನು ಪರಿಚಯಿಸಿದರು. ಹರ್ಷಿತಾ ವಂದಿಸಿದರು.

# ಕೈಮಗ್ಗ ಕೇಂದ್ರಗಳಿಗೆ ಅಧ್ಯಯನ ಭೇಟಿ




■ ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಕೆ.ಎಲ್.ಇ ಸಂಸ್ಥೆಯ ಕಲಾ ಹಾಗೂ ವಾಣಿಜ್ಯ ಮಹಾವಿದ್ಯಾಲಯದ ಬಿ.ಎ ಗೃಹ ವಿಜ್ಞಾನ ವಿಭಾಗ ಹಾಗೂ ಬಿ.ಕಾಂ ಅರ್ಥಶಾಸ್ತ್ರ ವಿಭಾಗದ ವಿದ್ಯಾರ್ಥಿಗಳು ಸೂಕ್ಷ್ಮ, ಸಣ್ಣ ಹಾಗೂ ಮಧ್ಯಮ ಕೈಮಗ್ಗ ಉದ್ಯಮಗಳ ಸಮಸ್ಯೆಗಳು ಹಾಗೂ ಮಹತ್ವದ ಕುರಿತು ಪ್ರಾಯೋಗಿಕ ಅಭ್ಯಾಸ ಹಾಗೂ ತಿಳುವಳಿಕೆ ಪಡೆಯಲು ಗದಗ ಜಿಲ್ಲೆಯ ನರಸಾಪುರ ಗ್ರಾಮದಲ್ಲಿರುವ ಕರ್ನಾಟಕ ಕೈಮಗ್ಗ ಅಭಿವೃದ್ಧಿ ಕಾರ್ಪೊರೇಷನ್ ಹಾಗೂ ವಿವಿಧ ಕೈಮಗ್ಗ ಕೇಂದ್ರಗಳಿಗೆ ಭೇಟಿ ನೀಡಿ ಉದ್ಯಮದ ಪರಿಚಯ ಪಡೆದರು.

ವಿದ್ಯಾರ್ಥಿಗಳು ಜವಳಿ ಉತ್ಪಾದನೆಯ ಪ್ರಾಯೋಗಿಕ ಅಂಶಗಳು ಮತ್ತು ಭಾರತದ ಸಾಂಸ್ಕೃತಿಕ ಮತ್ತು ಆರ್ಥಿಕ ಚೌಕಟ್ಟಿನಲ್ಲಿ ಕೈಮಗ್ಗಗಳ ಪಾತ್ರದ ವಿವರಣೆ ಪಡೆದರು. ಗೃಹ ವಿಜ್ಞಾನ ವಿಭಾಗದ ಮುಖ್ಯಸ್ಥರಾದ ವೀಣಾ ತಿಲಾಪೂರವರು ವಿದ್ಯಾರ್ಥಿಗಳಿಗೆ ಬಟ್ಟೆ ಮತ್ತು ನೂಲಿನ ಪ್ರಕಾರಗಳ ಬಗ್ಗೆ ವಿವರಿಸಿದರು. ಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ. ಎ.ಕೆ. ಮಠ, ವಿದ್ಯಾರ್ಥಿಗಳಿಗೆ ಪ್ರಾಯೋಗಿಕ ಅನುಭವವನ್ನು ನೀಡುವ ಇಂತಹ ವಿದ್ಯಾರ್ಥಿ ಅಧ್ಯಯನ ಭೇಟಿಯನ್ನು ಹಮ್ಮಿಕೊಂಡಿದ್ದ ಗೃಹ ವಿಜ್ಞಾನ ಮತ್ತು ಅರ್ಥಶಾಸ್ತ್ರ ವಿಭಾಗದ ಮುಖ್ಯಸ್ಥರನ್ನು ಹಾಗೂ ವಿದ್ಯಾರ್ಥಿಗಳನ್ನು ಅಭಿನಂದಿಸಿದರು.

ಪ್ರಾಂಶುಪಾಲರ ನಿರಂತರ ಬೆಂಬಲ ಮತ್ತು ಪ್ರೋತ್ಸಾಹಕ್ಕಾಗಿ ಪ್ರೊ. ಆಯ್.ಬಿ. ಪಾಟೀಲ, ಪ್ರೊ. ವೀಣಾ ಆರ್.ತಿರ್ಲಾಪೂರ ಮತ್ತು ಅಧ್ಯಯನ ಕೈಗೊಂಡಿದ್ದ ವಿದ್ಯಾರ್ಥಿಗಳು ಧನ್ಯವಾದಗಳನ್ನು ತಿಳಿಸಿದರು.

# ಸದೃಢ ದೇಹದಲ್ಲಿ ಸದೃಢ ಮನಸ್ಸಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಇಂದಿನ ದಿನಮಾನಗಳಲ್ಲಿ ಪ್ರತಿಯೊಬ್ಬರಿಗೂ ಯೋಗಾಭ್ಯಾಸ ಅತ್ಯಂತ ಅವಶ್ಯಕವಾಗಿದ್ದು, ಎಲ್ಲರೂ ನಿತ್ಯ ಯೋಗ ಮಾಡಬೇಕೆಂದು ಗ್ರಾ.ಪಂ ನೂತನ ಅಧ್ಯಕ್ಷೆ ಪವಿತ್ರ ಪ್ರಲ್ಹಾದ ಹೊಸಳ್ಳಿ ಹೇಳಿದರು.

ಅವರು ತಾಲೂಕಿನ ಅಡವಿಸೋಮಾಪೂರ ಗ್ರಾಮದ ಸರಕಾರಿ ಪ್ರೌಢಶಾಲಾ ಆವರಣದಲ್ಲಿ ಯೋಗ ಪಾಠಶಾಲೆಯ ಸುವರ್ಣ ಮಹೋತ್ಸವದ ಪ್ರಯುಕ್ತ ಎಸ್.ವಾಯ್.ಬಿ.ಎಂ.ಎಸ್ ಯೋಗ ಪಾಠಶಾಲೆ ಹಾಗೂ ಆಯುಷ್ಮಾನ್ ಆರೋಗ್ಯ ಮಂದಿರ ಪಾಪನಾಶಿ ಇವರ ಸಂಯುಕ್ತ ಆಶ್ರಯದಲ್ಲಿ ಹಮ್ಮಿಕೊಂಡ ಉಚಿತ ಯೋಗ ತರಬೇತಿ ಶಿಬಿರವನ್ನು ಉದ್ಘಾಟಿಸಿ ಮಾತನಾಡಿದರು.

ನಿತ್ಯ ಬೆಳಿಗ್ಗೆ ಬೇಗ ಎದ್ದು ಯೋಗ, ವ್ಯಾಯಾಮ ಹಾಗೂ ಉತ್ತಮ ಆಹಾರವನ್ನು ಸೇವಿಸುವುದು ಆರೋಗ್ಯಕ್ಕೆ ಉತ್ತಮ. ಚಿಕ್ಕ



ವಯಸ್ಸಿನಲ್ಲಿ ಮಾರಣಾಂತಿಕ ಕಾಯಿಲೆಗಳು ಬರದಂತೆ ನಾವೆಲ್ಲ ಎಚ್ಚರಿಕೆಯಿಂದ ಇರಬೇಕು. ಸದೃಢವಾದ ದೇಹದಲ್ಲಿ ಸದೃಢವಾದ ಮನಸ್ಸು ಇರುತ್ತದೆ ಎನ್ನುವಂತೆ ತಮ್ಮ ಆರೋಗ್ಯವನ್ನು ಕಾಪಾಡಿಕೊಂಡು ದೀರ್ಘಾಯುಷಿಗಳಾಗಬೇಕೆಂದು ಸಲಹೆ ನೀಡಿದರು.

ಬಸವ ಯೋಗ ಕೇಂದ್ರದ ಪ್ರಾಚಾರ್ಯ ಕೆ.ಎಸ್. ಪಲ್ಲೇದ ಮಾತನಾಡಿ, ಯೋಗ ಪದ್ಧತಿ ದೇಶದ ಆಸ್ತಿಯಾಗಿದ್ದು, ಅಂತಾರಾಷ್ಟ್ರೀಯ ಖ್ಯಾತಿ ಪಡೆದುಕೊಂಡಿದೆ. ಯೋಗಾಭ್ಯಾಸದಿಂದ ಆರೋಗ್ಯಕರ ಜೀವನವನ್ನು ಸಾಗಿಸಬಹುದು ಎಂದರು.

ವೈದ್ಯಾಧಿಕಾರಿ ಅಶೋಕ ಮತ್ತಿಕಟ್ಟಿ ಮಾತನಾಡಿದರು. ಗ್ರಾ.ಪಂ ಸದಸ್ಯೆ ಬಸಮ್ಮ ಪುರದ, ಯೋಗ ಶಿಕ್ಷಕಿ ಸುಧಾ ಪಾಟೀಲ, ಗ್ರಾ.ಪಂ ಸಿಬ್ಬಂದಿ ಮಹಾಂತೇಶ ದಡವಾಡ, ಹನಮಂತಪ್ಪ ಹೊಂಬಳ, ಮಂಜುನಾಥ ಮೇಗಲಮನಿ ಮುಂತಾದವರು ಇದ್ದರು.

### 'ವಿಶ್ವ ಅಧಿಕ ರಕ್ತದೊತ್ತಡ ದಿನ'ದ ಅಂಗವಾಗಿ ಅರಿವು ಮೂಡಿಸುವ ಕಾರ್ಯಕ್ರಮ

# ಅಧಿಕ ರಕ್ತದೊತ್ತಡದ ಬಗ್ಗೆ ಎಚ್ಚರಿಕೆಯಿರಲಿ

■ ವಿಜಯಸಾಕ್ಷಿ ಸುದ್ದಿ, ಗದಗ

ಈಗಿನ ಆಧುನಿಕ ಜೀವನ ಶೈಲಿಯಿಂದಾಗಿ ಅಸಾಂಕ್ರಾಮಿಕ ರೋಗಗಳು ಹೆಚ್ಚಾಗುತ್ತಿದ್ದು, 100 ಜನರಲ್ಲಿ 25 ಜನರಿಗೆ ಅಧಿಕ ರಕ್ತದೊತ್ತಡ ಕಂಡುಬರುತ್ತದೆ. ಮದ್ಯಪಾನ, ತಂಬಾಕು ಸೇವನೆ, ಅಹಿತಕರ ಆಹಾರ ಸೇವನೆ, ದೈಹಿಕ ಚಟುವಟಿಕೆಗಳ ಕೊರತೆ, ಅತಿಯಾದ ದೇಹದ ತೂಕ, ಮಾನಸಿಕ ಒತ್ತಡ ಇವೆಲ್ಲ ಕಾರಣದಿಂದ ಅಧಿಕ ರಕ್ತದೊತ್ತಡದ ಪ್ರಕರಣಗಳು ಹೆಚ್ಚಾಗುತ್ತಿವೆ. ಆರಂಭಿಕ ಹಂತದಲ್ಲಿ ಅಧಿಕ ರಕ್ತದೊತ್ತಡವನ್ನು ಪತ್ತೆ ಮಾಡಿ ಸೂಕ್ತ ಚಿಕಿತ್ಸೆ ಪಡೆಯದಿದ್ದರೆ ಹೃದಯ ಸಂಬಂಧಿ ಖಾಯಿಲೆ, ಪಾರ್ಶ್ವವಾಯು, ಮೂತ್ರಪಿಂಡದ ಖಾಯಿಲೆ ಇತ್ಯಾದಿ ದೀರ್ಘಕಾಲದ ರೋಗಗಳಿಂದ ಬಳಲಬೇಕಾಗುತ್ತದೆ ಎಂದು ತಾಲೂಕಾ ಆರೋಗ್ಯಾಧಿಕಾರಿ ಡಾ. ಪ್ರೀತ್ ಕೋನಾ ಎಚ್ಚರಿಸಿದರು.

ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ,



ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ವಿಭಾಗ, ತಾಲೂಕಾ ಆರೋಗ್ಯಾಧಿಕಾರಿಗಳ ಕಚೇರಿ ಹಾಗೂ ಸ್ಫೂರ್ತಿ ಪ್ಯಾರಾ ಮೆಡಿಕಲ್ ಕಾಲೇಜು ಗದಗ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಅಧಿಕ ರಕ್ತದೊತ್ತಡ ದಿನದ ಅಂಗವಾಗಿ ವಿದ್ಯಾರ್ಥಿಗಳಿಗೆ ಅಧಿಕ ರಕ್ತದೊತ್ತಡ ಕುರಿತು ಹಮ್ಮಿಕೊಂಡಿದ್ದ ಅರಿವು ಮೂಡಿಸುವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಜಿಲ್ಲೆಯಲ್ಲಿ ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮದಲ್ಲಿ 30

> ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ವಿಭಾಗದ ಜಿಲ್ಲಾ ಕಾರ್ಯಕ್ರಮ ಸಂಯೋಜಕ ಡಾ. ರವಿ ಕಡಗಾವಿ ಮಾತನಾಡಿ, ಅಧಿಕ ರಕ್ತದೊತ್ತಡವನ್ನು Silent Killer ಎಂದು ಕರೆಯುತ್ತಾರೆ. ಆದ್ದರಿಂದ 30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ವರ್ಷದಲ್ಲಿ ಕನಿಷ್ಠ 1 ಬಾರಿ ಅಧಿಕ ರಕ್ತದೊತ್ತಡ ಪರೀಕ್ಷೆಯನ್ನು ಮಾಡಿಸಿಕೊಳ್ಳಬೇಕೆಂದು ತಿಳಿಸಿದರು.

ವರ್ಷ ಮೇಲ್ಪಟ್ಟವರಿಗೆ ವರ್ಷದಲ್ಲಿ ಕನಿಷ್ಠ ಒಂದು ಬಾರಿ ಅಧಿಕ ರಕ್ತದೊತ್ತಡ ಮತ್ತು ಮಧುಮೇಹವನ್ನು ಪರೀಕ್ಷೆ ಮಾಡಲಾಗುತ್ತದೆ ಮತ್ತು ಆರಂಭಿಕ ಹಂತದಲ್ಲಿ ರೋಗಗಳನ್ನು ಪತ್ತೆ ಮಾಡಿ ಸೂಕ್ತ ಚಿಕಿತ್ಸೆಯನ್ನು ಒದಗಿಸಲಾಗುತ್ತದೆ. ಜಿಲ್ಲೆಯಲ್ಲಿ ಪ್ರತಿ ಹಳ್ಳಿಗಳಲ್ಲಿ 30 ವರ್ಷ ಮೇಲ್ಪಟ್ಟವರಿಗೆ ಆರೋಗ್ಯ ತಪಾಸಣೆ ಶಿಬಿರಗಳನ್ನು ಕೈಗೊಳ್ಳುತ್ತ ನಮ್ಮ ಇಲಾಖೆಯ ಆಶಾ ಕಾರ್ಯಕರ್ತೆಯರು, ಪ್ರಾಥಮಿಕ ಆರೋಗ್ಯ ಸುರಕ್ಷಾ ಅಧಿಕಾರಿಗಳು, ಸಮುದಾಯ ಆರೋಗ್ಯ ಅಧಿಕಾರಿಗಳು, ಆರೋಗ್ಯ ನಿರೀಕ್ಷಣಾಧಿಕಾರಿಗಳು ರಕ್ತದೊತ್ತಡ, ಮಧುಮೇಹ ಹಾಗೂ 3 ಸಾಮಾನ್ಯ ಕ್ಯಾನ್ಸರ್‌ಗಳ ತಪಾಸಣೆಯನ್ನು ಕೈಗೊಳ್ಳುತ್ತಿದ್ದಾರೆ ಎಂದರು.

ಅಧ್ಯಕ್ಷತೆ ವಹಿಸಿದ್ದ ಶಶಿಕಾಂತ ಕಳಕಣ್ಣವರ, ಭುವನೇಶ್ವರಿ ಪಾಟೀಲ ಸಾಮದರ್ಭಿಕವಾಗಿ ಮಾತನಾಡಿದರು. ದೀಪಾ ಹಿರೇಮನಿ ಪ್ರಾರ್ಥಿಸಿದರು. ಮುತ್ತುನಗೌಡ ಎಸ್.ರಬ್ಬನಗೌಡ್ರ ಕಾರ್ಯಕ್ರಮ ನಿರೂಪಿಸಿದರು. ಉಮಾ ಮಹೇಶ್ವರಿ ವಂದಿಸಿದರು.

ಈ ಸಂದರ್ಭದಲ್ಲಿ ಎಪಿಡೆಮಿಯೊಲಾಜಿಸ್ಟ್ ಡಾ. ಪ್ರವೀಣ ನಿಡಗುಂದಿ, ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಗೋಪಾಲ ಸುರಪುರ, ಜಿಲ್ಲಾ ಆರೋಗ್ಯ ಮತ್ತು ಕ್ಷೇಮ ಕೇಂದ್ರ ಸಂಯೋಜಕ ಜಸ್ವಿನ್ ತೇಗೂರ, ಹಿ.ಆ. ನಿರೀಕ್ಷಣಾಧಿಕಾರಿ ರಮೇಶ ಅರಹುಣಸಿ, ಜಿಲ್ಲಾ ಆರ್ಥಿಕ ಮತ್ತು ಸಲಕರಣೆ ಸಲಹೆಗಾರ ವಿಠಲ್ ನಾಯಕ್, ಡಾಟಾ ಮ್ಯಾನೇಜರ್ ವೀರೇಶ ಮದಕಟ್ಟಿ, ಫಯಾಜ್ ಮಕಾನದಾರ, ಡಿಈಓ ಹಾಗೂ ಜಿಲ್ಲಾ ಸಮೀಕ್ಷಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಹಾಗೂ ಸ್ಫೂರ್ತಿ ಪ್ಯಾರಾ ಮೆಡಿಕಲ್ ಕಾಲೇಜಿನ ಎಲ್ಲ ಉಪನ್ಯಾಸಕರು, ಆಡಳಿತ ವರ್ಗದವರು, ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಅವಿರೋಧ ಆಯ್ಕೆಗೆ ಸಂತಸ

■ವಿಜಯಸಾಕ್ಷಿ ಸುದ್ದಿ, ರೋಣ



ಇಲ್ಲಿನ ನಿಡಗುಂದಿ ಗ್ರಾಮ ಪಂಚಾಯಿತಿಯಲ್ಲಿ ನಡೆದ ಉಪ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆ ಮಾಡುವಲ್ಲಿ ಶ್ರಮಿಸಿದ ಗ್ರಾಮಸ್ಥರಿಗೆ ತಾ.ಪಂ ಮಾಜಿ ಸದಸ್ಯ, ಗಜೇಂದ್ರಗಡ ತಾಲೂಕಾ ಕುರುಬ ಸಮಾಜದ ಅಧ್ಯಕ್ಷ ಅಂದಪ್ಪ ಬಿಚ್ಚೂರ ಧನ್ಯವಾದ ಸಲ್ಲಿಸಿದರು.

ಅವರು ಶನಿವಾರ ನಿಡಗುಂದಿ ಗ್ರಾಮದ 4ನೇ ವಾರ್ಡಿಗೆ ನಡೆದ ಚುನಾವಣೆಯಲ್ಲಿ ಅವಿರೋಧವಾಗಿ ಆಯ್ಕೆಯಾದ ಅಭ್ಯರ್ಥಿಯ ವಿಜಯೋತ್ಸವದ ನಂತರ ಮಾತನಾಡಿದರು.

ಈ ಹಿಂದೆ ಇದೇ ವಾರ್ಡಿಗೆ ಮರ್ತುಜಾ ಖಾಧರ ಮುಲ್ಲಾ ಅವರ ನಿಧನದ ನಂತರ ತೆರವಾದ ಸ್ಥಾನಕ್ಕೆ ಚುನಾವಣೆ ಅನಿವಾರ್ಯವಾಗಿತ್ತು. ಗ್ರಾಮಸ್ಥರು ಒಗ್ಗಟ್ಟಿನಿಂದ ಕಾಂಗ್ರೆಸ್ ಬೆಂಬಲಿತ ಅಭ್ಯರ್ಥಿ ಇಮಾಮಸಾಬ ಮದರಸಾಬ ಬಾಗವಾನ ಅವರನ್ನು ಅವಿರೋಧವಾಗಿ ಆಯ್ಕೆ ಮಾಡಿರುವುದು ಸಂತಸದ ವಿಚಾರವಾಗಿ ಎಂದರು.

ಗ್ರಾಮಸ್ಥರ ನಿರ್ಧಾರಕ್ಕೆ ಶಾಸಕ ಜಿ.ಎಸ್. ಪಾಟೀಲ ಅಭಿನಂದನೆ ಸಲ್ಲಿಸಿದ್ದು, ಗ್ರಾಮೀಣ ಭಾಗಗಳಲ್ಲಿ ಏಕತೆ, ಸಹೋದರತೆಗೆ ಇದು ಮಾದರಿಯಾಗಿದೆ ಎಂದಿದ್ದಾರೆ.

ಈ ಸಂದರ್ಭದಲ್ಲಿ ಗ್ರಾ.ಪಂ ಅಧ್ಯಕ್ಷೆ ಗೀತಾ ಕುಕನೂರ, ಉಪಾಧ್ಯಕ್ಷೆ ಕವಿತಾ ಪೂಜಾರ, ವೀರಪ್ಪ ಬಿಚ್ಚೂರ, ಶಿವಣ್ಣ ಸೂಡಿ, ಶಶಿಧರ ಹೊಟ್ಟಿನ, ಅಂದಪ್ಪ ಚಲವಾದಿ, ಫಕ್ಕೀರಪ್ಪ ಕುಕನೂರ ಸೇರಿದಂತೆ ಗ್ರಾ.ಪಂ ಸರ್ವ ಸದಸ್ಯರು, ಕಾಂಗ್ರೆಸ್ ಪಕ್ಷದ ಮುಖಂಡರು, ಕಾರ್ಯಕರ್ತರು, ಗ್ರಾಮಸ್ಥರು ಉಪಸ್ಥಿತರಿದ್ದರು.

### ನರೇಗಾ ಸಮುದಾಯ ಕಾಮಗಾರಿ ಸ್ಥಳದಲ್ಲಿ ಕೂಲಿಕಾರ್ಮಿಕರಿಗೆ ಆರೋಗ್ಯ ತಪಾಸಣಾ ಶಿಬಿರ

# ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿವಹಿಸಿ

■ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಸಂಪತ್ತು ಇಲ್ಲದಿದ್ದರೂ ಮನುಷ್ಯ ಬದುಕಬಹುದು. ಆದರೆ ಮನುಷ್ಯನ ಆರೋಗ್ಯ ಹದಗೆಟ್ಟರೆ ಬಾಳಲು ಸಾಧ್ಯವಿಲ್ಲ. ದೇವರು ಕೊಟ್ಟ ಆರೋಗ್ಯಯುತ ಶರೀರವನ್ನು ಯಾವುದೇ ದುಶ್ಚಟಕ್ಕೆ ಬಲಿಮಾಡಿಕೊಳ್ಳದೇ ಇರುವಷ್ಟು ದಿನ ಆರೋಗ್ಯಯುತವಾಗಿ ಬದುಕಿ ಮುಂದಿನ ಪೀಳಿಗೆಗೆ ದಾರಿದೀಪವಾಗೋಣ ಎಂದು ಸೂಡಿ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ಅಶೋಕ್ ಕಂಬಿ ಹೇಳಿದರು.

ಸೂಡಿ ಗ್ರಾ.ಪಂ ವ್ಯಾಪ್ತಿಯ ದ್ಯಾಮಹುಣಶಿ ಗ್ರಾಮದಲ್ಲಿ ನರೇಗಾ ಯೋಜನೆಯಡಿ ನಡೆದ ಸಮುದಾಯ ಕಾಮಗಾರಿ ಬದು ನಿರ್ಮಾಣ ಕೆಲಸದಲ್ಲಿ ಕೂಲಿಕಾರ್ಮಿಕರ ಆರೋಗ್ಯ ತಪಾಸಣಾ ಶಿಬಿರ ಉದ್ಘಾಟಿಸಿ ಅವರು ಮಾತನಾಡಿದರು.

ವರ್ತಮಾನ ದಿನಗಳಲ್ಲಿ ಆರೋಗ್ಯವನ್ನು ಸದೃಢವಾಗಿಟ್ಟುಕೊಂಡವನೇ ಜೀವನದಲ್ಲಿ ಅತೀ ಶ್ರೀಮಂತ ವ್ಯಕ್ತಿಯಾಗುತ್ತಾನೆ. ಆರೋಗ್ಯ ಸದೃಢವಿದ್ದಾಗ ಜೀವನದಲ್ಲಿ ಎಲ್ಲ ಸುಖ ಸಂತೋಷವನ್ನು ಕಾಣಲು ಸಾಧ್ಯ. ಹುಟ್ಟಿನಿಂದ ಶ್ರೀಮಂತನಾಗಿದ್ದರೂ ಆರೋಗ್ಯದಲ್ಲಿ ಏರುಪೇರಾದರೆ ಶ್ರೀಮಂತಿಕೆ ಆತನನ್ನು ಉಳಿಸದು. ಅದೇ ಉತ್ತಮ ಆರೋಗ್ಯ ಹೊಂದಿದ್ದರೆ ಜೀವನ



ಸುಖಮಯವಾಗಿರುತ್ತದೆ. ಹೀಗಾಗಿ ಕೂಲಿಕಾರ್ಮಿಕರು ಅನ್ಯ ಚಟಕ್ಕೆ ದಾಸರಾಗದೇ ತಮ್ಮ ಆರೋಗ್ಯವನ್ನು ಕಾಪಾಡಿಕೊಂಡು ಕುಟುಂಬ ಸದಸ್ಯರ ಒಳಿತಿಗೆ ಶ್ರಮಿಸಿ. ಈಗಿನ ಒತ್ತಡದ ಜೀವನದಲ್ಲಿ ಬಿಪಿ ಮತ್ತು ಶುಗರ್ ಸರ್ವೇಸಾಮಾನ್ಯ ಕಾಯಿಲೆಯಾಗಿವೆ. ಬಿಪಿ ಮತ್ತು ಶುಗರ್ ಬಂದಿದೆ ಎಂದು ಚಿಂತಿಸದೇ ಅದರ ಬಗ್ಗೆ ಮುಂಜಾಗೃತಾ ಕ್ರಮ ತಗೆದುಕೊಳ್ಳಿ ಎಂದರು.

ಸದ್ಯದ ಪರಿಸ್ಥಿತಿಯಲ್ಲಿ ವೈದ್ಯಕೀಯ ವೆಚ್ಚವನ್ನು ಭರಿಸುವುದು ಗ್ರಾಮೀಣ ಪ್ರದೇಶದ ಕೂಲಿಕಾರ್ಮಿಕರಿಗೆ ಕಷ್ಟ. ಹೀಗಾಗಿ ತಾಲೂಕು ಪಂಚಾಯಿತಿ ಮತ್ತು ಗ್ರಾಮ ಪಂಚಾಯಿತಿ ವತಿಯಿಂದ ನರೇಗಾ ಕೂಲಿಕಾರ್ಮಿಕರಿಗೆ ಉಚಿತವಾಗಿ ಆರೋಗ್ಯ ತಪಸಣಾ ಶಿಬಿರವನ್ನು ಆಯೋಜಿಸಲಾಗಿದೆ. ಕೂಲಿಕಾರ್ಮಿಕರು ಇದರ ಸದುಪರ್ಯೋಗ ಪಡೆದುಕೊಂಡು, ಶಿಬಿರದಲ್ಲಿ ಭಾಗವಹಿಸಿದ ವೈದ್ಯರಿಂದ ಒಳ್ಳೆಯ ಸಲಹೆ ಪಡೆದುಕೊಳ್ಳಿ ಎಂದು ತಿಳಿಹೇಳಿದರು.

ಸೂಡಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆರೋಗ್ಯ ಅಧಿಕಾರಿಗಳಾದ ಮಹೇಶ ಹಿರೇಮಠ, ದಿಲ್ಷಾನ್ ಮುಲ್ಲಾ, ಮನೋಹರ್ ಕಣ್ಣಿ ಹಾಗೂ ಆಶಾ ಕಾರ್ಯಕರ್ತೆಯರು ಆರೋಗ್ಯ ತಪಾಸಣೆ ಶಿಬಿರಲ್ಲಿ ಭಾಗವಹಿಸಿ, ನರೇಗಾ ಕೂಲಿಕಾರ್ಮಿಕರಿಗೆ ಬಿಪಿ, ಶುಗರ್ ಸೇರಿದಂತೆ ಸಾಮಾನ್ಯ ಆರೋಗ್ಯ ತಪಾಸಣೆ ಮಾಡಿದರು. ಕೂಲಿಕಾರರಿಗೆ ಅಗತ್ಯ ಮಾತ್ರೆಗಳನ್ನು ನೀಡಿ ಹೆಚ್ಚಿನ ಚಿಕಿತ್ಸೆಗೆ ಪ್ರಾಥಮಿಕ ಆರೋಗ್ಯ ಕೇಂದ್ರವನ್ನು ಸಂಪರ್ಕಿಸುವಂತೆ ತಿಳಿಸಿದರು.

ಶಿಬಿರದಲ್ಲಿ ನರೇಗಾ ವಿಭಾಗದ ತಾಂತ್ರಿಕ ಸಹಾಯಕ ಸುನೀಲ್ ಶಿರೋಳ, ಗ್ರಾಮ ಕಾಯಕಮಿತ್ರ ಸುಧಾ ಕುಷ್ಟಗಿ, ಬಿಎಫ್‌ಟಿ ಶಂಕರಗೌಡ ಪಾಟೀಲ್, ನರೇಗಾ ಸಿಬ್ಬಂದಿ ವರ್ಗ ಹಾಗೂ ಸೂಡಿ ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು ಹಾಜರಿದ್ದರು.

ತಾಲೂಕು ಐಇಸಿ ಸಂಯೋಜಕ ಸುರೇಶ್ ಬಾಳಿಕಾಯಿ ಮಾತನಾಡಿ, ನರೇಗಾ ಯೋಜನೆಯಡಿ ಕೂಲಿಕಾರ್ಮಿಕರಿಗೆ ಅನೇಕ ಸೌಲಭ್ಯಗಳು ಇವೆ. ಯೋಜನೆಯಡಿ ಸಿಗುವ ಸೌಲಭ್ಯಗಳನ್ನು ಕೂಲಿಕಾರ್ಮಿಕರು ಸದೂಪಯೋಗಪಡಿಸಿಕೊಳ್ಳಬೇಕು. ಕಾಮಗಾರಿ ನಡೆಯುವ ಸ್ಥಳದಲ್ಲಿ ನೆರಳಿನ ವ್ಯವಸ್ಥೆ, ಕುಡಿಯುವ ನೀರಿನ ವ್ಯವಸ್ಥೆ, ಪ್ರಥಮ ಚಿಕಿತ್ಸಾ ವ್ಯವಸ್ಥೆ, ಕೆಲಸದ ಬೇಸಿಗೆ ರಿಯಾಯತಿ ಸೌಲಭ್ಯಗಳನ್ನು ನರೇಗಾ ಕೂಲಿಕಾರ್ಮಿಕರು ಪಡೆದುಕೊಳ್ಳಬೇಕೆಂದು ಮಾಹಿತಿ ನೀಡಿದರು.

# ಆನ್‌ಲೈನ್ ಮೂಲಕ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025–26ನೇ ಸಾಲಿನ ಇಲಾಖೆಯ ಮೆಟ್ರಿಕ್ ಪೂರ್ವ ವಿದ್ಯಾರ್ಥಿನಿಲಯಗಳಿಗೆ ಹೊಸದಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಗೆ ಆನ್ಲೈನ್ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಜೂನ್ 16 ಕೊನೆಯ ದಿನ ಆಗಿರುತ್ತದೆ. ಗದಗ ತಾಲೂಕಿನ ಮೆಟ್ರಿಕ್ ಪೂರ್ವ ಬಾಲಕ ಹಾಗೂ ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಪ್ರವೇಶಕ್ಕಾಗಿ ಹೊಸದಾಗಿ ಪ್ರವೇಶ ಬಯಸುವ ಪ್ರವರ್ಗ–1, 2ಎ, 2ಬಿ, 3ಎ, 3ಬಿ, ಪ.ಜಾ/ಪ.ವರ್ಗ ಮತ್ತು ಇತರೆ ಜನಾಂಗಗಳಿಗೆ ಸೇರಿದ ವಿದ್ಯಾರ್ಥಿಗಳಿಂದ 2025–26ನೇ ಸಾಲಿಗೆ ಆನ್ಲೈನ್ ಮೂಲಕ ಅರ್ಜಿ ಸಲ್ಲಿಸಬಹುದಾಗಿದೆ.

ವಿದ್ಯಾರ್ಥಿಯ ಪೋಷಕರ ವಾರ್ಷಿಕ ಆದಾಯ ಮಿತಿ (ಪ್ರವರ್ಗ–1, ಎಸ್.ಸಿ & ಎಸ್.ಟಿ ರೂ. 2.50 ಲಕ್ಷ) ಹಾಗೂ (ಪ್ರವರ್ಗ–2ಎ, 2ಬಿ, 3ಎ, 3ಬಿ, ಇತರೆ ಹಿಂದುಳಿದ ವರ್ಗ ಹಾಗೂ ಇತರೆ ರೂ. 1.00 ಲಕ್ಷ ).

ವಿದ್ಯಾರ್ಥಿಗಳು https://shp.karnataka.gov.in/bcwd ಅನ್ನು ಸಂಪರ್ಕಿಸಿ ಆನ್ಲೈನ್ ನಲ್ಲಿ ಅರ್ಜಿಯನ್ನು ಸಲ್ಲಿಸಬೇಕು.

ತಾಲೂಕುವಾರು ವಿದ್ಯಾರ್ಥಿ ನಿಲಯಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್ಸೈಟ್ https://bcwd.karnataka.gov.in ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ bcwd-helpline@gmail.com ಇ–ಮೇಲ್ ಮುಖಾಂತರ ಅಥವಾ ಜಿಲ್ಲಾ/ತಾಲೂಕು ಅಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರನ್ನು ಅಗತ್ಯ ದಾಖಲೆಗಳೊಂದಿಗೆ ಸಂಪರ್ಕಿಸುವುದು.

ಸಂಪರ್ಕಿಸಬಹುದಾದ ಸಹಾಯವಾಣಿ ಸಂಖ್ಯೆ: 8050770004 ಮತ್ತು 8050770005

ವಿದ್ಯಾರ್ಥಿಗಳು/ವಿದ್ಯಾರ್ಥಿನಿಯರು ಅರ್ಜಿಗಳನ್ನು ಹಾಕಲು ತಾಲೂಕ ಹಿಂದುಳಿದ ವರ್ಗಗಳ ಕಲ್ಯಾಣ ಅಧಿಕಾರಿಗಳಾದ

ಡಾ: ಬಸವರಾಜ .ವೆಂ. ಬಳ್ಳಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಹಾಗೂ ವಸತಿ ನಿಲಯಗಳು ಈ ಕೆಳಗಿನಂತಿವೆ.

ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಹರ್ಲಾಪೂರ–ಃಅಘಅ –530 ಸರ್ಕಾರಿ ಶಾಲೆ ಆವರಣದಲ್ಲಿ ಹರ್ಲಾಪೂರ. ; ಮೆಟ್ರಿಕ್ ಪೂರ್ವ ಬಾಲಕರ ಪರಿವರ್ತಿತ ವಿದ್ಯಾರ್ಥಿ ನಿಲಯ ಗದಗ–BBCWD –532 ಗಾಂಧಿ ನಗರ ಹತ್ತಿರ ಆಂಜನೇಯ ದೇವಸ್ಥಾನ ಬೆಟಗೇರಿ ಗದಗ; ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಕದಡಿ–BCWD –534 ಕದಡಿ ಗ್ರಾಮದಲ್ಲಿ ಬಳಗಾನೂರ ರಸ್ತೆ, ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಲಕ್ಕುಂಡಿ ತ –535 ಶಿವಪ್ಪ ಅಜ್ಜನ ಮಠದ ಎದುರಗಡೆ ಸಾ. ಲಕ್ಕುಂಡಿ; ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿ ನಿಲಯ ಮುಳಗುಂದ –BCWD –536 ಬಾಲಲೀಲಾ ಕಲ್ಯಾಣ ಮಂಟಪ್ ಹಿಂದುಗಡೆ ಯಳವತ್ತಿ ರೋಡ್ ಮುಳಗುಂದ; ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ ಗದಗ–ಃಃಅಘಅ –537 ಗಣಪತಿ ದೇವಸ್ಥಾನ ಜೆ.ಟಿ. ಕಾಲೇಜ ಹತ್ತಿರ ಹಾತಲಗೇರಿ ರೋಡ್ ಗದಗ.

### ವಿಕಸಿತ ಕೃಷಿ ಸಂಕಲ್ಪ ಅಭಿಯಾನ 2025

# ಮುಂಗಾರು ಪೂರ್ವ ಸಿದ್ಧತೆ ಕಾರ್ಯಕ್ರಮ

■ವಿಜಯಸಾಕ್ಷಿ ಸುದ್ದಿ, ಗದಗ




ವಿಕಸಿತ ಕೃಷಿ ಸಂಕಲ್ಪ ಅಭಿಯಾನ–2025ರ ಅಡಿಯಲ್ಲಿ ಮುಂಗಾರು ಪೂರ್ವ ಸಿದ್ಧತೆ ಕಾರ್ಯಕ್ರಮವನ್ನು ಕೇಂದ್ರ ಸರಕಾರದ ಕೃಷಿ ಹಾಗೂ ರೈತರ ಕಲ್ಯಾಣ ಸಚಿವಾಲಯವು ದೇಶಾದ್ಯಾಂತ ಹಮ್ಮಿಕೊಳ್ಳುತ್ತಿದೆ. ಕೃಷಿ ವಿಜ್ಞಾನ ಕೇಂದ್ರಗಳ ಕೃಷಿ ವಿಶ್ವ ವಿದ್ಯಾಲಯ, ಐ.ಸಿ.ಎ.ಆರ್ ಸಂಸ್ಥೆಗಳು, ಕೃಷಿ ಇಲಾಖೆ, ತೆ–ೂಟಗಾರಿಕೆ ಇಲಾಖೆ, ಇಫ್ಕೊ, ಅಧಿಕಾರಿಗಳ ಸಹಯೋಗದಲ್ಲಿ ಈ ಕಾರ್ಯಕ್ರಮವನ್ನು ಏರ್ಪಡಿಸಲಾಗುವುದು. ಇಲಾಖೆಯ ಅಧಿಕಾರಿಗಳು, ವಿಜ್ಞಾನಿಗಳು, ಸಂಘ ಸಂಸ್ಥೆಗಳು, ಸಮೂಹ ರೈತರ ಬಳಿಗೆ ಬಂದು ಕೃಷಿ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

ಈ ಅಭಿಯಾನದಲ್ಲಿ 1500–2000 ತಂಡಗಳ ಮೂಲಕ ದೇಶದ 700 ಜಿಲ್ಲೆಗಳಲ್ಲಿನ ಸುಮಾರು 1.5ರಿಂದ 2.00 ಕೋಟಿ ರೈತರೊಂದಿಗೆ ನೇರ ಸಂವಾದ ನಡೆಸಲಾಗುವುದು. ಕೃಷಿಗೆ ಸಂಬಂಧಿಸಿದ ವಿನೂತನ ತಾಂತ್ರಿಕತೆಗಳು, ಹೊಸ ಬೀಜಗಳ ಮಾಹಿತಿ ಜೊತೆಗೆ ಸರಕಾರದ ಯೋಜನೆಗಳ ಕುರಿತು ಕೂಡ ಮಾಹಿತಿ ನೀಡಲಾಗುವುದು. ಜೊತೆಗೆ ಈ ಅಭಿಯಾನದಲ್ಲಿ ರೈತರು ನೀಡುವ ಪ್ರಕ್ರಿಯೆಗಳನ್ನು ಸಂಗ್ರಹಿಸಿ ಅವರ ಹೊಸ ಆವಿಷ್ಕಾರಗಳನ್ನು ಸಂಶೋಧನೆ ಮತ್ತು ಪ್ರಸಾರ ಚಟುವಟಿಕೆಗಳಲ್ಲಿ ಬಳಸಲಾಗುವುದು.

ಈ ಹಿನ್ನೆಲೆಯಲ್ಲಿ 2025ರ ಮುಂಗಾರು ಹಂಗಾಮಿನಲ್ಲಿ ಐ.ಸಿ.ಎ.ಆರ್–ಕೆ.ಎಚ್. ಪಾಟೀಲ ಕೃಷಿ ವಿಜ್ಞಾನ ಕೇಂದ್ರ, ಹುಲಕೋಟಿಯು ಮುಂಗಾರು ಪೂರ್ವ ಸಿದ್ಧತೆ ಅಭಿಯಾನವನ್ನು ಮೇ. 16ರಿಂದ ಜೂನ್ 2ರವರೆಗೆ ಕೃಷಿ ಇಲಾಖೆ, ಇಫ್ಕೊ ಸಂಸ್ಥೆ, ತೋಟಗಾರಿಕೆ ಇಲಾಖೆ ಹಾಗೂ ಪಶುಸಂಗೋಪನೆ ಇಲಾಖೆ ರೈತ ಸಂಘಟನೆಗಳ ಸಹಯೋಗದಲ್ಲಿ ಗದಗ ಜಿಲ್ಲೆಯಾದ್ಯಂತ ಹಮ್ಮಿಕೊಳ್ಳಲಾಗುವುದು. ಕೃಷಿಗೆ ಸಂಬಂಧಪಟ್ಟ ವಿನೂತನ ತಾಂತ್ರಿಕತೆಗಳು, ಮಣ್ಣು ಪರೀಕ್ಷೆ, ಬೀಜೋಪಚಾರದ ಪ್ರಾತ್ಯಕ್ಷಿಕೆ, ಸಿರಿಧಾನ್ಯ ಬೆಳೆ ಹಾಗೂ ಅವುಗಳ ಪೌಷ್ಠಿಕತೆ, ಕೃಷಿ ಭಾಗ್ಯ, ಇಲಾಖೆಗಳ ಯೋಜನೆಗಳು, ಸಮಗ್ರ ಕೃಷಿ ಪದ್ಧತಿ, ಡ್ರೋನ್ ಪ್ರಾತ್ಯಕ್ಷಿಕೆ ಮತ್ತು ರೈತರ ಆವಿಷ್ಕಾರಗಳಿಗೆ ಹೆಚ್ಚು ಆದ್ಯತೆ ಕೊಟ್ಟು ಈ ಅಭಿಯಾನವನ್ನು ಹಮ್ಮಿಕೊಳ್ಳಲಾಗುವುದು.

ಈ ಮುಂಗಾರು ಹಂಗಾಮಿನ ಪೂರ್ವ ಸಿದ್ಧತೆ ಅಭಿಯಾನದ ತಂಡವು ತಮ್ಮ ಗ್ರಾಮಕ್ಕೆ ಬಂದಾಗ ರೈತರೆಲ್ಲರೂ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಮಾಹಿತಿಯನ್ನು ತಿಳಿದುಕೊಂಡು ವಿಕಸಿತ ಕೃಷಿ ಸಂಕಲ್ಪ ಅಭಿಯಾನ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿ ಎಂದು ಪ್ರಕಟಣೆ ತಿಳಿಸಿದೆ.

ದೇಶದ ಎಲ್ಲ ಗ್ರಾಮಗಳನ್ನು ಈ ಯೋಜನೆ ಅಡಿಯಲ್ಲಿ ಸಂಪರ್ಕಿಸಿ ಮಾಹಿತಿ ನೀಡಲಾಗುವುದು. ಪ್ರಮುಖವಾಗಿ ಕೃಷಿಯಲ್ಲಿ ವಿನೂತನ ತಂತ್ರಜ್ಞಾನಗಳು, ಹೊಸ ತಳಿಗಳು, ಬೀಜೋಪಚಾರ, ಮಣ್ಣು ಆಧಾರಿತ ಕೃಷಿ ಬೆಳೆಗಳು, ಕೃಷಿ ಭಾಗ್ಯ ಯೋಜನೆ, ಸಮಗ್ರ ಬೇಸಾಯ ಪದ್ಧತಿ, ಸರಕಾರದ ವಿವಿಧ ಯೋಜನೆಗಳು ಹಾಗೂ ಕೃಷಿಯಲ್ಲಿ ಹೆಚ್ಚಿನ ಲಾಭವನ್ನು ಹೇಗೆ ಪಡಯಬಹುದು ಎಂಬುದರ ಬಗ್ಗೆ ಮಾಹಿತಿಯನ್ನು ನೀಡಲಾಗುವುದು.

### ವಿದ್ಯಾರ್ಥಿಗಳಿಗಾಗಿ ಹಮ್ಮಿಕೊಂಡಿದ್ದ ಕತೆ–ಕಾವ್ಯ ರಚನಾ ಕಮ್ಮಟದಲ್ಲಿ ಯಲ್ಲಪ್ಪ ಹಂದ್ರಾಳ

# ಸೃಜನಶೀಲ ಅಭಿವ್ಯಕ್ತಿಗೆ ಕಮ್ಮಟಗಳು ಸಹಕಾರಿ

■ವಿಜಯಸಾಕ್ಷಿ ಸುದ್ದಿ, ಗದಗ




ಮಕ್ಕಳು ಬಾಲ್ಯದಲ್ಲಿಯೇ ಸಾಹಿತ್ಯಾಭಿರುಚಿಯೊಂದಿಗೆ ಉತ್ತಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು. ಅಂಕ ಗಳಿಕೆಯ ಭರಾಟೆಯಲ್ಲಿ ಇಂದು ಮಕ್ಕಳು ಕತೆ ಕೇಳುವ, ಕಾವ್ಯವನ್ನು ಆಸ್ವಾದಿಸುವ ಅವಕಾಶದಿಂದ ವಂಚಿತರಾಗಿದ್ದಾರೆ. ಬಾಲ್ಯ ಸುಂದರವಾಗಿದ್ದರೆ ಮಾತ್ರ ಬದುಕು ಸುಂದರವಾಗಿರುತ್ತದೆ ಎಂದು ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆಯ ಉಪನ್ಯಾಸಕ ಯಲ್ಲಪ್ಪ ಹಂದ್ರಾಳ ನುಡಿದರು.

ಅವರು ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತು ಹಾಗೂ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಷ್ಠಾನದ ಸಹಯೋಗದಲ್ಲಿ ಜರುಗಿದ ಎರಡು ದಿನಗಳ ಕತೆ ಹಾಗೂ ಕಾವ್ಯ ರಚನಾ ಕಮ್ಮಟವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳು ಸಾಹಿತ್ಯದ ಬಗ್ಗೆ ವಿದ್ಯಾರ್ಥಿ ದಿಸೆಯಲ್ಲಿಯೇ ಆಸಕ್ತಿ ಮೂಡಿಸಿಕೊಂಡರೆ ಬರಹಗಾರರಾಗುವದಲ್ಲದೇ ಉತ್ತಮ ಓದುಗರಾಗಲು ಸಾಧ್ಯವಾಗುತ್ತದೆ. ಇದರಿಂದ ಭಾಷೆ, ಸಂಸ್ಕೃತಿಯ ಸಂವರ್ಧನೆಯಾಗುತ್ತದೆ ಎಂದು ಅಭಿಪ್ರಾಯಪಟ್ಟರು.


ಮುಖ್ಯ ಅತಿಥಿಗಳಾಗಿ ಭಾಗವಹಿಸಿದ್ದ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಪಾಟೀಲ ಮಾತನಾಡಿ, ಓದುವ ಸಂಸ್ಕೃತಿಯಿಂದ ವಿಮುಖರಾಗುತ್ತಿರುವ ಇಂದಿನ ವಿದ್ಯಾರ್ಥಿಗಳಿಗೆ ಸಾಹಿತ್ಯಾಭಿರುಚಿಯನ್ನು ಬೆಳೆಸುವ ನಮ್ಮ ಆದ್ಯತೆಯಾಗಬೇಕು. ಈ ದಿಸೆಯಲ್ಲಿಯೂ ವಿದ್ಯಾರ್ಥಿಗಳ ಪ್ರತಿಭೆಯನ್ನು ಗುರುತಿಸಿ ಗೌರವಿಸುವ ಕಾರ್ಯವನ್ನು ಪ್ರತಿಷ್ಠಾನ ಮಾಡಲಿದೆ ಎಂದು ತಿಳಿಸಿದರು.

ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಕಸಾಪ ಅಧ್ಯಕ್ಷ ವಿವೇಕಾನಂದಗೌಡ ಪಾಟೀಲ ಮಾತನಾಡಿ, ಪ್ರತಿಯೊಬ್ಬರಲ್ಲಿಯೂ ವಿಶಿಷ್ಠವಾದ ಸಾಮರ್ಥ್ಯವಿರುತ್ತದೆ. ಅದಕ್ಕೆ ಅವಕಾಶ ದೊರೆಯಬೇಕು. ಈ ದಿಸೆಯಲ್ಲಿ ಪರಿಷತ್ತು ಕಮ್ಮಟಗಳನ್ನು ಆಯೋಜಿಸುವ ಮೂಲಕ ವಿದ್ಯಾರ್ಥಿ ದಿಸೆಯಲ್ಲಿಯೇ ಸಾಹಿತ್ಯಿಕ ಒಲವನ್ನು ಬೆಳೆಸಲು ಪ್ರಯತ್ನಿಸುತ್ತಿದೆ ಎಂದರು.

ವೇದಿಕೆಯ ಮೇಲೆ ಡಾ. ಜಿ.ಬಿ. ಪಾಟೀಲ, ಸಂಪನ್ಮೂಲ ವ್ಯಕ್ತಿಗಳಾದ ಡಾ. ವಿನಾಯಕ ಕಮತದ, ಬಸವರಾಜ ನೆಲಜೇರಿ, ಸಿದ್ಧಯ್ಯ ಮಠಪತಿ, ಭುವನಾ ಅಂಗಡಿ, ಶಿಲ್ಪಾ ಹಳ್ಳಿಕೇರಿ, ಗುರುರಾಜ ಅಣ್ಣಿಗೇರಿ, ಮಂಜುಳಾ ತುಮ್ಮರಮಟ್ಟಿ ಉಪಸ್ಥಿತರಿದ್ದರು. ಹರ್ಷಿತಾ ಉಮಚಗಿ ಪ್ರಾರ್ಥಿಸಿದರು. ಡಿ.ಎಸ್. ಬಾಪುರಿ ಸ್ವಾಗತಿಸಿದರು. ಸತೀಶ ಚನ್ನಪ್ಪಗೌಡ ನಿರೂಪಿಸಿದರು. ಅಮರೇಶ ರಾಂಪೂರ ವಂದಿಸಿದರು.

# ರಮಾಕಾಂತ ಜೋಷಿ ನಿಧನಕ್ಕೆ ಸಚಿವ ಎಚ್.ಕೆ. ಪಾಟೀಲ ಸಂತಾಪ

■ವಿಜಯಸಾಕ್ಷಿ ಸುದ್ದಿ, ಗದಗ



ಕನ್ನಡ ಸಾರಸ್ವತ ಲೋಕದ ಅಟ್ಟ ಎಂದೇ ಕರೆಯಲ್ಪಡುತ್ತಿದ್ದ ಮನೋಹರ ಗ್ರಂಥಮಾಲಾದ ವ್ಯವಸ್ಥಾಪಕರು, ನಿವೃತ್ತ ಪ್ರಾಧ್ಯಾಪಕರೂ ಆಗಿದ್ದ ರಮಾಕಾಂತ ಜೋಷಿ(89) ಅವರ ನಿಧನಕ್ಕೆ ಕಾನೂನು, ಪ್ರವಾಸೋದ್ಯಮ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಶೋಕ ವ್ಯಕ್ತಪಡಿಸಿದ್ದಾರೆ.

ಖ್ಯಾತ ಸಾಹಿತಿ ಮತ್ತು ಮನೋಹರ ಗ್ರಂಥಮಾಲಾದ ರೂವಾರಿ ಜಿ.ಬಿ. ಜೋಷಿ (ಜಡಭರತ) ಅವರ ಪುತ್ರರಾಗಿದ್ದ ರಮಾಕಾಂತ ಜೋಷಿ ಧಾರವಾಡದ ಸಾಹಿತ್ಯ, ಸಂಸ್ಕೃತಿ, ಕಲೆ, ಸಂಗೀತವನ್ನು ನಾಡಿಗೆ ಪರಿಚಯಿಸುವುದರಲ್ಲಿ ತೊಡಗಿಸಿಕೊಂಡಿದ್ದರು.

ಮನೋಹರ ಗ್ರಂಥಮಾಲಾ ಎಂದರೆ ಖ್ಯಾತ ಸಾಹಿತಿಗಳು, ದಿಗ್ಗಜರು, ಕವಿಗಳು, ವಿಮರ್ಶಕರು, ಸಂಗೀತಗಾರರು ಸೇರುವ ಹಾಗೂ ಚರ್ಚಿಸುವ, ಅವರಿಗೆಲ್ಲಾ ಸ್ಫೂರ್ತಿ ನೀಡುವ ಸ್ಥಳವಾಗಿತ್ತು. ಕನ್ನಡದ ಕೀರ್ತಿ ಕೀರ್ತಿನಾಥ ಕುರ್ತಕೋಟಿ, ಗಿರೀಶ ಕಾರ್ನಾಡ, ಚನ್ನವೀರ ಕಣವಿ, ಗಿರಡ್ಡಿ ಗೋವಿಂದರಾಜು, ಖ್ಯಾತ ಸಂಶೋಧಕ ಎಂ.ಎಂ. ಕಲಬುರ್ಗಿ ಮುಂತಾದ ಖ್ಯಾತ ಸಾಹಿತಿಗಳ ಸಂಗಮ ಇಲ್ಲಿರುತ್ತಿತ್ತು. ಹೀಗಾಗಿ ಮನೋಹರ ಗ್ರಂಥಮಾಲಾ ಅಟ್ಟ ಎಂದರೆ ಕನ್ನಡ ಸಾಹಿತ್ಯ, ಸಂಗೀತ ಕ್ಷೇತ್ರವನ್ನು ಜತೆಗೆ ಧಾರವಾಡದ ಹಿರಿಮೆಯನ್ನು ಅಟ್ಟಕ್ಕೇರಿಸಿದ ಸಂಸ್ಥೆ ಎಂದು ಎಚ್.ಕೆ. ಪಾಟೀಲ ಹೇಳಿದ್ದಾರೆ.

ರಮಾಕಾಂತ ಜೋಷಿ ಅವರ ನಿಧನದಿಂದ ಧಾರವಾಡದ ಸಾಹಿತ್ಯ, ಸಾಂಸ್ಕೃತಿಕ ಲೋಕಕ್ಕೆ ತುಂಬಲಾರದ ನಷ್ಟ ಉಂಟಾಗಿ ಕೊಂಡಿಯೊಂದು ಕಳಚಿದಂತಾಗಿದೆ. ಅವರ ಆತ್ಮಕ್ಕೆ ಚಿರಶಾಂತಿ ದೊರೆಯಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದಾರೆ.

# ಧಾರವಾಡದ ಹಿರಿಯ ಸಾಹಿತಿ ಡಾ. ರಮಾಕಾಂತ ಜೋಶಿ ವಿಧಿವಶ!

■ವಿಜಯಸಾಕ್ಷಿ ಸುದ್ದಿ, ಧಾರವಾಡ

ಹಿರಿಯ ಸಾಹಿತಿ ಡಾ. ರಮಾಕಾಂತ ಜೋಶಿ ಅವರು ಶನಿವಾರ ವಿಧಿವಶರಾಗಿದ್ದಾರೆ. ಭಾನುವಾರ ಬೆಳಿಗ್ಗೆ 10.00 ಗಂಟೆಗೆ ಧಾರವಾಡ ಹೊಸಯಲ್ಲಾಪುರ ರುದ್ರಭೂಮಿಯಲ್ಲಿ ಅಂತ್ಯಕ್ರಿಯೆ ನಡೆಯಲಿದೆ. ಬೆಳಿಗ್ಗೆ 09.00 ರಿಂದ 10.00 ರ ವರೆಗೆ ಧಾರವಾಡದ ಮಂಗಳವಾರ ಪೇಟೆ, ಮೆಣಸಿನಕಾಯಿ ಓಣಿಯ ಅವರ ಸ್ವಗೃಹದಲ್ಲಿ ಸಾರ್ವಜನಿಕ ದರ್ಶನಕ್ಕೆ ವ್ಯವಸ್ಥೆ ಮಾಡಲಾಗಿದೆ ಎಂದು ಕುಟುಂಬದ ಮೂಲಗಳು ಹೇಳಿವೆ.

# ಚಂದ್ರಕಾಂತ ಬೆಲ್ಲದ ಪರ ಮತ ಯಾಚನೆ

■ವಿಜಯಸಾಕ್ಷಿ ಸುದ್ದಿ, ಗದಗ



ಧಾರವಾಡದ ಪ್ರತಿಷ್ಠಿತ ಕರ್ನಾಟಕ ವಿದ್ಯಾವರ್ಧಕ ಸಂಘದ ತ್ರೈವಾರ್ಷಿಕ ಚುನಾವಣೆಯು ಮೇ 25ರಂದು ನಡೆಯಲಿರುವ ಹಿನ್ನೆಲೆಯಲ್ಲಿ ಚಂದ್ರಕಾಂತ ಬೆಲ್ಲದ ಮತ್ತು ಮಕ್ಕಳು ಹಾಗೂ ಮಹರ್ಷಿ ಶಂಕರ ಹಲಗತ್ತಿ ಅವರ ತಂಡವು ಗದಗ ನಗರಕ್ಕೆ ಆಗಮಿಸಿ ಸದಸ್ಯರಲ್ಲಿ ಮತಯಾಚನೆ ಮಾಡಿದರು.

ಪ್ರಧಾನ ಕಾರ್ಯದರ್ಶಿ, ಸ್ಥಾನದ ಅಭ್ಯರ್ಥಿ ಶಂಕರ ಹಲಗತ್ತಿ, ವೀರಣ್ಣ ಒಡ್ಡಿನ, ಡಾ. ಜಿನದತ್ತ ಹಡಗಲಿ, ಶಿವಾನಂದ ಭಾವಿಕಟ್ಟಿ, ಡಾ. ಧನವಂತ ಹಾಜವಗೋಳ ಅವರ ತಂಡವು ಪಂಚಾಕ್ಷರ ಗವಾಯಿಗಳ ಪದವಿ ಮಹಾವಿದ್ಯಾಲಯಕ್ಕೆ ಭೇಟಿ ನೀಡಿ ಮೂರು ವರ್ಷಗಳ ಅವಧಿಯಲ್ಲಿ ಕೈಗೊಂಡಿದ್ದ ಕಾರ್ಯಗಳ ಕುರಿತು ವಿವರಿಸಿದರಲ್ಲದೆ ತಮ್ಮ ಮತಗಳಲ್ಲದೆ ಇತರ ಸದಸ್ಯರ ಮತಗಳನ್ನು ಚಂದ್ರಕಾಂತ ಬೆಲ್ಲದ ಅವರ ಗುಂಪಿಗೆ ಹಾಕಿಸುವ ಮೂಲಕ ಗುಂಪಿನ ಎಲ್ಲ 15 ಸದಸ್ಯರನ್ನೂ ಬೆಂಬಲಿಸಿ ಆಯ್ಕೆ ಮಾಡುವಂತೆ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಪಿಪಿಜಿ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ರಾಜಶೇಖರ ದಾನರಡ್ಡಿ, ಪ್ರೊ. ಬಸವರಾಜ ಪೂಜಾರ್, ಪ್ರೊ. ಬಾಹುಬಲಿ ಜೈನರ, ನಿವೃತ್ತ ಪ್ರಾಚಾರ್ಯರಾದ ವಿ.ಎಂ. ಗುರುಮಠ, ಡಾ. ಪ್ರಭು ಗಂಜಿಹಾಳ ಮೊದಲಾದವರಿದ್ದರು.

# ನರಗುಂದ: ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲೆಯ ನರಗುಂದ ಪುರಸಭೆಯ ವ್ಯಾಪ್ತಿಯಲ್ಲಿ ಸ್ವಚ್ಛ ಭಾರತ್ ಮಿಷನ್ 2.0 ರ ಅಡಿಯಲ್ಲಿ ಐಇಸಿ ಮಾಹಿತಿ, ಶಿಕ್ಷಣ ಮತ್ತು ಸಂವಹನ ಘಟಕದಡಿಯಲ್ಲಿ ಘನ ಮತ್ತು ದ್ರವ ತ್ಯಾಜ್ಯ ನಿರ್ವಹಣೆಯ ಕುರಿತು ನಗರ ಸ್ಥಳೀಯ ಮಟ್ಟದಲ್ಲಿ ವಿವಿಧ ಬಗೆಯ ಚಟುವಟಿಕೆಗಳನ್ನು ಕೈಗೊಳ್ಳಲು ನಲ್ಮ್–ಡೇ ಯೋಜನೆಯ ಸ್ವ ಸಹಾಯ ಸದಸ್ಯರನ್ನು ಕಮ್ಯೂನಿಟಿ ಮೊಬಲೈಜರ್ ಹುದ್ದೆಗೆ ಮಾಸಿಕ ಗೌರವಧನ ಆಧಾರದ ಮೇಲೆ ತಾತ್ಕಾಲಿಕ ಸೇವೆ ಪಡೆದುಕೊಳ್ಳಲು ಅವಕಾಶವಿದೆ,

ಕನಿಷ್ಠ ಎಸ್‌ಎಸ್‌ಎಲ್‌ಸಿ/10 th pass , ಕನ್ನಡ ಭಾಷೆ ಓದು ಬರಹ ಜ್ಞಾನ ಹೊಂದಿರಬೇಕು. 18–45 ವರ್ಷ ವಯೋಮಾನದವರಾಗಿರಬೇಕು.

ಆಸಕ್ತಿ ಇರುವ ಅಭ್ಯರ್ಥಿಗಳು ತಮ್ಮ ಎಲ್ಲಾ ಅಗತ್ಯ ದಾಖಲಾತಿಯೊಂದಿಗೆ ಮೇ 23 ರೊಳಗಾಗಿ ನಿಗದಿತ ಅರ್ಜಿ ನಮೂನೆ ಪಡೆದು ಮಾಹಿತಿಯನ್ನು ಭರ್ತಿ ಮಾಡಿ ಮುಖ್ಯಾಧಿಕಾರಿಗಳು ಮುಖ್ಯಾಧಿಕಾರಿಗಳು ಪುರಸಭೆ ನರಗುಂದ ಈ ವಿಳಾಸಕ್ಕೆ ದ್ವಿಪ್ರತಿಯಲ್ಲಿ ಸಲ್ಲಿಸತಕ್ಕದ್ದು. ಅರ್ಜಿ ಹಾಗೂ ಹೆಚ್ಚಿನ ವಿವರಗಳಿಗೆ ನರಗುಂದ ಪುರಸಭೆಯ ಕಾರ್ಯಾಲಯವನ್ನು ಸಂಪರ್ಕಿಸಬಹುದಾಗಿದೆ.

# ಸಾಧನೆ ಮಾಡದ ಸಾಧನಾ ಸಮಾವೇಶ



■ವಿಜಯಸಾಕ್ಷಿ ಸುದ್ದಿ, ಗದಗ

ಎರಡು ವರ್ಷದ ಹಿಂದೆ ರಾಜ್ಯದಲ್ಲಿ ಅಧಿಕಾರಕ್ಕೆ ಬಂದ ಕಾಂಗ್ರೆಸ್ ಸರ್ಕಾರ ಯಾವುದೇ ಸಾಧನೆಯನ್ನು ಮಾಡದೇ ಮೇ. 20ರಂದು ಸಾಧನಾ ಸಮಾವೇಶ ಮಾಡಲು ಹೊರಟಿರುವುದು ಯಾವ ಪುರಷಾರ್ಥಕ್ಕಾಗಿ ಎಂದು ಬಿಜೆಪಿ ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ರಾಜ್ಯ ಕಾಂಗ್ರೆಸ್ ಸರ್ಕಾರದ ನಡೆಯನ್ನು ಟೀಕಿಸಿದ್ದಾರೆ. ಈ ಬಗ್ಗೆ ಪತ್ರಿಕಾ ಹೇಳಿಕೆ ನೀಡಿರುವ ಅವರು, ಚುನಾವಣೆಯ ಸಂದರ್ಭದಲ್ಲಿ ನೂರಾರು ಭರವಸೆಗಳನ್ನು ನೀಡಿ ಅಧಿಕಾರಕ್ಕೆ ಬಂದ ನಂತರ ಎಲ್ಲ ಮರೆತು ಕೇವಲ 5 ಗ್ಯಾರಂಟಿಗಳನ್ನು ಕೊಟ್ಟಿದ್ದನ್ನೇ ಕಳೆದ 2 ವರ್ಷದಿಂದ ಡಂಗೂರ ಬಾರಿಸುತ್ತಾ ಬಂದಿದ್ದಾರೆ. 5 ಗ್ಯಾರಂಟಿಗಳನ್ನು ಬಿಟ್ಟು ರಾಜ್ಯದಲ್ಲಿ ಬೇರೆ ಯಾವುದೇ ಅಭಿವೃದ್ಧಿ ಕಾಮಗಾರಿಗಳು ನಡೆದಿಲ್ಲ. ಆರೋಗ್ಯ ಇಲಾಖೆ ಅನಾರೋಗ್ಯ ಇಲಾಖೆಯಾಗಿ ಮಾರ್ಪಟ್ಟಿದೆ. ಅಲ್ಲಿ ನೌಕರರಿಗೆ ಸಂಬಳವನ್ನು ಕೂಡಾ ಕೊಡದಷ್ಟು ಹೀನ ಮಟ್ಟಕ್ಕೆ ಈ ಇಲಾಖೆ ಬಂದು ನಿಂತಿದೆ. ಶಿಕ್ಷಣ ಇಲಾಖೆಯು ಗಬ್ಬೆದ್ದು ಹೋಗಿದೆ. ರಾಜ್ಯದ ಗೃಹ ಇಲಾಖೆ ಸಂಪೂರ್ಣವಾಗಿ ನಿಷ್ಕ್ರಿಯವಾಗಿದೆ. ರಾಜ್ಯದಲ್ಲಿ ಈ ಸರ್ಕಾರ ಬಂದಾಗಿನಿಂದ ಸ್ತಬ್ಧವಾಗಿರುವ ಅಭಿವೃದ್ಧಿ ಕಾರ್ಯಗಳು ಸಾಧನೆಯೇ, ಮುಡಾ ಹಗರಣ, ವಾಲ್ಮೀಕಿ ಹಗರಣ ಮುಂತಾದವು ಸಾಧನೆಗಳೇ, ಪರಿಶಿಷ್ಟ ಜಾತಿ ಅಭಿವೃದ್ಧಿಗೆ ಮೀಸಲಿಟ್ಟ ಹಣ ಗ್ಯಾರಂಟಿ ಯೋಜನೆಗಳಿಗೆ ಹಣ ಬಳಸಿದ್ದು ಸಾಧನೆಯೇ, ಸತತವಾಗಿ ಹಿಂದೂ ಕಾರ್ಯಕರ್ತರ ಮೇಲೆ ಹಲ್ಲೆ ಆಗುತ್ತಿರುವದು ಸಾಧನೆಯೇ ಎಂದವರು ಪ್ರಶ್ನಿಸಿದ್ದಾರೆ.

ಯಾವ ಪುರಷಾರ್ಥಕ್ಕಾಗಿ ಹೊಸಪೇಟೆಯಲ್ಲಿ ಸಾಧನಾ ಸಮಾವೇಶ ಮಾಡುತ್ತಿದ್ದಾರೆ ಎಂದು ಜಿಲ್ಲಾ ವಕ್ತಾರ ಎಂ.ಎಂ. ಹಿರೇಮಠ ಸೇರಿದಂತೆ ಸಹ ವಕ್ತಾರ ದತ್ತಣ್ಣ ಜೋಶಿ, ಮಾಧ್ಯಮ ಪ್ರಮುಖ ರಾಜು ಹೊಂಗಲ, ಸಹ ಪ್ರಮುಖ ಶ್ರೀನಿವಾಸ ಹುಬ್ಬಳ್ಳಿ, ಶಹರ ಅಧ್ಯಕ್ಷ ಸುರೇಶ ಮರಳಪ್ಪನವರ, ಗ್ರಾಮೀಣ ಅಧ್ಯಕ್ಷ ಬೂದಪ್ಪ ಹಳ್ಳಿ ರಾಜ್ಯ ಸರ್ಕಾರದ ನಡೆಯನ್ನು ತೀವ್ರವಾಗಿ ಖಂಡಿಸಿದ್ದಾರೆ.

### ಪತ್ರಿಕಾಗೋಷ್ಠಿಯಲ್ಲಿ ಅಂಗನವಾಡಿ ಕಾರ್ಯಕರ್ತೆಯರ ಸಂಘದ ಜಿಲ್ಲಾಧ್ಯಕ್ಷೆ ಎಸ್.ಎಸ್. ಕಲ್ಲಳ್ಳಿ ಆಗ್ರಹ

# ಕಾರ್ಯಕರ್ತರಿಗೆ ನಿವೃತ್ತಿ ಉಪಧನ ನೀಡಿ

■ವಿಜಯಸಾಕ್ಷಿ ಸುದ್ದಿ, ಗದಗ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಸಮಗ್ರ ಶಿಶು ಅಭಿವೃದ್ಧಿ ಯೋಜನೆ (ಖಅಆಖ) ಯಲ್ಲಿ ದುಡಿಯುತ್ತಿರುವ ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ಗ್ರಾಚ್ಯುಟಿ ಪಾವತಿ ಕಾಯ್ದೆ 1972ರ ಅಡಿಯಲ್ಲಿ ಗ್ರಾಚ್ಯುಟಿ (ನಿವೃತ್ತಿ ಉಪಧನ) ಪಡೆಯಲು ಅರ್ಹರು ಎಂಬುದಾಗಿ ಸುಪ್ರೀಂ ಕೋರ್ಟ್ ಅತ್ಯಂತ ಮಹತ್ವದ ತೀರ್ಪನ್ನು ನೀಡಿದೆ. ಆದರೂ, ರಾಜ್ಯ ಸರ್ಕಾರ ಇದೂವರೆಗೂ ನಮಗೆ ಗ್ರಾಚ್ಯುಟಿ ವೇತನ ನೀಡಿಲ್ಲ. ಕೂಡಲೇ 2011–12ರಿಂದ ನಿವೃತ್ತಿ ಹೊಂದಿದ ಸಹಾಯಕರಿಗೆ ನಿವೃತ್ತಿ ಉಪಧನ ನೀಡಬೇಕೆಂದು ಸಂಘದ ಜಿಲ್ಲಾಧ್ಯಕ್ಷೆ ಎಸ್.ಎಸ್. ಕಲ್ಲಳ್ಳಿ ಆಗ್ರಹಿಸಿದರು.

ಇಲ್ಲಿನ ಪತ್ರಿಕಾ ಭವನದಲ್ಲಿ ಶನಿವಾರ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 2022ರ ಎಪ್ರಿಲ್ 25ರಂದು ಸುಪ್ರೀಂ ಕೋರ್ಟಿನ ಮುಖ್ಯ ನ್ಯಾಯಮೂರ್ತಿಗಳಾದ ಅಜಯ್ ರೆಸೂಗಿ ಮತ್ತು ಅಭಯ್ ಎಸ್.ಓಕಾ ಅವರ ನೇತೃತ್ವದ ನ್ಯಾಯಪೀಠವು ಅಂಗನವಾಡಿ ನೌಕರರ ಕೆಲಸ–ಕಾರ್ಯಗಳನ್ನು ಸೂಕ್ಷ್ಮವಾಗಿ ಗಮನಿಸಿ ಅವರ ಕೆಲಸವು ಅರೆಕಾಲಿಕವಲ್ಲ, ಅಂಗನವಾಡಿ ನೌಕರರು ಪೂರ್ಣ ಸಮಯದ ಕೆಲಸಗಳನ್ನು ನಿರ್ವಹಿಸುತ್ತಿದ್ದಾರೆಂಬುದನ್ನು ಒತ್ತಿ ಹೇಳಿದ್ದಾರೆ.




ಆದರೂ, ಸರ್ಕಾರ ನಮ್ಮ ಬಗ್ಗೆ ಗಮನ ಹರಿಸುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರು ನಿಯಮಿತವಾದ ಸಂಬಳ ಮತ್ತಿತರ ಸವಲತ್ತುಗಳಿಂದಲೂ ವಂಚಿತರಾಗಿದ್ದಾರೆ. ಅವರು ನಿರ್ವಹಿಸುವ ಕೆಲಸ ಶಾಸನಬದ್ಧವಾಗಿದ್ದರೂ ಸಹ ಅದನ್ನು ನಾಗರಿಕ ಸೇವೆಯೆಂದಾಗಲಿ ಅಥವಾ ನಾಗರಿಕ ಹುದ್ದೆ ಎಂಬುದಾಗಿಯೂ ಪರಿಗಣಿಸಿಲ್ಲ. ಕನಿಷ್ಠ ವೇತನಕ್ಕಿಂತ ಕಡಿಮೆ ಗೌರವಧನದಲ್ಲಿ ದುಡಿಸಿಕೊಳ್ಳಲಾಗುತ್ತಿದೆ ಎಂಬುದನ್ನು ಸರ್ವೋಚ್ಚ ನ್ಯಾಯಾಲಯ ತನ್ನ ತೀರ್ಪಿನಲ್ಲಿ ಗಂಭೀರವಾಗಿ ಉಲ್ಲೇಖಿಸಿದೆ.

ಅಂಗನವಾಡಿ ನೌಕರರು ಪಡೆಯುವ ಗೌರವಧನವು ಕೂಡಾ ವೇತನದ ವ್ಯಾಖ್ಯಾನಕ್ಕೆ ಒಳಪಡುವುದರಿಂದ ವೇತನಕ್ಕಾಗಿಯೇ ನೇಮಕಗೊಂಡಿರುವ ಅಂಗನವಾಡಿಗಳ ಕಾರ್ಯಕರ್ತೆ ಮತ್ತು ಸಹಾಯಕಿಯರು 1972ರ ಗ್ರಾಚ್ಯುಟಿ ಪಾವತಿ ಕಾಯಿದೆಯ ಪ್ರಕಾರ ಅವರು ನೌಕರರಾಗಿರುತ್ತಾರೆ ಎಂದು ಸರ್ವೋಚ್ಚ ನ್ಯಾಯಾಲಯವು ತನ್ನ ತೀರ್ಪಿನಲ್ಲಿ ಸ್ಪಷ್ಟೀಕರಿಸಿದೆ ಎಂದು ಹೇಳಿದರು.

ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರು ಸುಮಾರು 50 ವರ್ಷಗಳಿಂದ ಸೇವೆ ಸಲ್ಲಿಸಿ ಇಂದು ಸಂಕಷ್ಟದ ಸ್ಥಿತಿಯಲ್ಲಿದ್ದಾರೆ. ಹಲವರು ಕಾಯಿಲೆಗಳಿಂದ ಬಳಲುತ್ತಿದ್ದು, ಆರ್ಥಿಕವಾಗಿ ಸಂಕಷ್ಟದ ಸ್ಥಿತಿಯಲ್ಲಿದ್ದಾರೆ. ಇನ್ನೂ ಹಲವರು ತಮ್ಮ ಇಳಿ ವಯಸ್ಸಿನಲ್ಲಿ ವೃದ್ಧಾಶ್ರಮದಲ್ಲಿ ಆಶ್ರಯ ಪಡೆದಿದ್ದಾರೆ. ಇಷ್ಟೆಲ್ಲಾ ಸಂಕಷ್ಟದ ಪರಿಸ್ಥಿತಿ ಇದ್ದರೂ ರಾಜ್ಯ ಸರ್ಕಾರ ಮಾತ್ರ ಕಣ್ಣು ತೆರೆದು ನೋಡುತ್ತಿಲ್ಲ. ಕೂಡಲೇ ನಮ್ಮ ನಿವೃತ್ತಿ ಉಪಧನ ನೀಡಬೇಕು. ಇದರಿಂದ ನಾವು ಸಮಾಜದಲ್ಲಿ ಎಲ್ಲರಂತೆ ಬದುಕಲು ಸಹಾಯವಾಗುತ್ತದೆ ಎಂದು ಹೇಳಿದರು.

ಈ ವೇಳೆ ರಾಜೇಶ್ವರಿ ಬಿಸನಳ್ಳಿ, ಗೀತಾ ಕೆರೂರು, ರತ್ನಾ ವಜ್ರೇಶ್ವರಿ, ವಿಜಯಾ, ಸಂಪತ್‌ಕುಮಾರಿ, ನೀಲಮ್ಮ ಮಾರನಬಸರಿ, ಶಾರದಾ ಶಿರಸಂಗಿ, ಬಸಮ್ಮ, ಹೇಮಲತಾ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

> 1972ರ ಗ್ರಾಚ್ಯುಟಿ ಪಾವತಿ ಕಾಯ್ದೆ ಪ್ರಕಾರ ಯಾವುದೇ ಉದ್ಯೋಗ ಘಟಕದಲ್ಲಿ 5 ವರ್ಷ ಸೇವೆ ಪೂರ್ಣಗೊಳಿಸಿ ಸ್ವಯಂ ನಿವೃತ್ತಿಯಾದವರು ಸಹ ಗ್ರಾಚ್ಯುಟಿ ಪಡೆಯಲು ಅರ್ಹತೆಯನ್ನು ಪಡೆದುಕೊಳ್ಳುತ್ತಾರೆ. ಪೂರ್ಣಕಾಲಿಕ ಸೇವೆ ಸಲ್ಲಿಸಿ ನಿವೃತ್ತರಾದವರಿಗೆ ನಿವೃತ್ತಿಗೊಂಡ 30 ದಿನಗಳಲ್ಲಿ ಅವರಿಗೆ ಸಲ್ಲಬೇಕಾದ ಗ್ರಾಚ್ಯುಟಿ ಮೊತ್ತವನ್ನು ಪಾವತಿಸಬೇಕಾಗುತ್ತದೆ. ಗ್ರಾಚ್ಯುಟಿ ಪಾವತಿಯಲ್ಲಿ ವಿಳಂಬವಾದರೆ ಶೇ.10ರಷ್ಟು ಬಡ್ಡಿ ಸಮೇತ ಸೇರಿಸಿ ಗ್ರಾಚ್ಯುಟಿ ಮೊತ್ತವನ್ನು ನೀಡಬೇಕೆಂಬುದು ಗ್ರಾಚ್ಯುಟಿ ಪಾವತಿ ಕಾಯ್ದೆಯ ನಿಬಂಧನೆಯಾಗಿದ್ದರೂ ಅಂಗನವಾಡಿ ಕಾರ್ಯಕರ್ತೆಯರು, ಸಹಾಯಕಿಯರನ್ನು ಕಡೆಗಣಿಸಲಾಗಿದೆ ಎಂದು ಎಸ್.ಎಸ್. ಕಲ್ಲಳ್ಳಿ ಆಕ್ರೋಶ ವ್ಯಕ್ತಪಡಿಸಿದರು.

### ವಾಕರಸಾ ಸಂಸ್ಥೆಯಿಂದ 'ನಮ್ಮ ಬಸ್ ನಿಲ್ದಾಣ–ಸ್ವಚ್ಛ ನಿಲ್ದಾಣ' ಸಾರ್ವಜನಿಕರ ಅಭಿಪ್ರಾಯ ಸಂಗ್ರಹ

# ನಿಮ್ಮ ಅಭಿಪ್ರಾಯ ದಾಖಲಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ವಿಭಾಗದ ಎಲ್ಲ ತಾಲೂಕಾ ಕೇಂದ್ರ ಬಸ್ ನಿಲ್ದಾಣಗಳಲ್ಲಿ 'ನಮ್ಮ ಬಸ್ ನಿಲ್ದಾಣ–ಸ್ವಚ್ಛ ನಿಲ್ದಾಣ' ಶೀರ್ಷಿಕೆಯಡಿಯಲ್ಲಿ ಬಸ್ ನಿಲ್ದಾಣದ ನಿರ್ವಹಣೆಯ ಬಗ್ಗೆ ಸಾರ್ವಜನಿಕರ ಅಭಿಪ್ರಾಯ ಪಡೆಯಲು ಕ್ಯೂಆರ್ ಕೋಡ್ ಮುದ್ರಿತ ಭಿತ್ತಿ ಪತ್ರವನ್ನು ಗದಗ ಹೊಸ ಬಸ್ ನಿಲ್ದಾಣದಲ್ಲಿ ವಿಭಾಗೀಯ ನಿಯಂತ್ರಣಾಧಿಕಾರಿಗಳಾದ ಡಿ.ಎಂ. ದೇವರಾಜ ಬಿಡುಗಡೆಗೊಳಿಸಿದರು.

ಕಾರ್ಯಕ್ರಮದಲ್ಲಿ ಬಸ್ ನಿಲ್ದಾಣಗಳ ಸ್ವಚ್ಛತೆ, ಶೌಚಾಲಯಗಳ ನಿರ್ವಹಣೆ, ತ್ಯಾಜ್ಯ ವಿಲೇವಾರಿ, ಶೌಚಾಲಯದ ದರ ಪಟ್ಟಿ ಅಳವಡಿಕೆ, ಶುದ್ಧ ನೀರಿನ ವ್ಯವಸ್ಥೆ, ಸಂಚಾರ ನಿಯಂತ್ರಕರ ಸೌಜನ್ಯದ ನಡವಳಿಕೆ ಇತ್ಯಾದಿ ಅಂಶಗಳ ಕುರಿತು ಮೌಲ್ಯಮಾಪನ ಮಾಡಿ ಶ್ರೇಣಿವಾರು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುವ ಕುರಿತಾಗಿ ಕ್ರಮ ಕೈಗೊಳ್ಳಲು ಸಂಸ್ಥೆಯ ಮಾನ್ಯ ವ್ಯವಸ್ಥಾಪಕ ನಿರ್ದೇಶಕರ ಸೂಚನೆಯಂತೆ ಎಲ್ಲ ಬಸ್ ನಿಲ್ದಾಣಗಳಲ್ಲಿ ಭಿತ್ತಿ ಪತ್ರವನ್ನು ಪ್ರದರ್ಶಿಸಲಾಗುವದು. ಸಾರ್ವಜನಿಕರು ತಮ್ಮ ಮೊಬೈಲ್‌ನಲ್ಲಿ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಹೆಚ್ಚು ಹೆಚ್ಚು ಅಭಿಪ್ರಾಯ ದಾಖಲಿಸಲು ವಿಭಾಗೀಯ ನಿಯಂತ್ರಣಾಧಿಕಾರಿಗಳು ತಿಳಿಸಿದರು.

ಈ ಸಂದರ್ಭದಲ್ಲಿ ವಿಭಾಗೀಯ ಸಾರಿಗೆ ಅಧಿಕಾರಿ ಪಿ.ವಿ. ಮೇತ್ರಿ, ಸಿ.ವಿ. ಇಟಗಿ ವಿತಾಂಶಿ, ವಿದ್ಯಾ ಕಾಂಬಳೆ, ಬಿ.ಎಲ್. ಗೆಣ್ಣೂರ, ಾರಿಗೆ ನಿಯಂತ್ರಕರು ಹಾಗೂ ಪ್ರಯಾಣಿಕರು ಹಾಜರಿದ್ದರು.



## ಅಭಿಪ್ರಾಯ ದಾಖಲಿಸುವುದು ಹೇಗೆ?

ಮೊಬೈಲ್‌ನಿಂದ ಕ್ಯೂಆರ್ ಕೋಡ್‌ನ್ನು ಸ್ಕ್ಯಾನ್ ಮಾಡುವದು. ಕ್ಯೂಆರ್ ಕೋಡ್ ಲಿಂಕ್‌ನಲ್ಲಿ ತಮ್ಮ ನೋಂದಾಯಿತ ಇ–ಮೇಲ್ ಐಡಿ ರಜಿಸ್ಟರ್ ಮಾಡುವದು. ಶೌಚಾಲಯದ ಸ್ವಚ್ಛತೆ, ಬಸ್ ನಿಲ್ದಾಣದ ಸ್ವಚ್ಛತೆ, ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ/ಮೂತ್ರಾಲಯದ ಬಳಕೆಯ ಶುಲ್ಕದ ಕುರಿತು ರೇಟಿಂಗ್ಸ್ ನೀಡುವದು. ಇತರೆ ಅನಿಸಿಕೆ ಅಥವಾ ಅಭಿಪ್ರಾಯವನ್ನು ದಾಖಲಿಸುವದು. ಒಟ್ಟಾರೆ ಶ್ರೇಣಿಯನ್ನು ನೀಡುವದು. ಇದರಿಂದಾಗಿ ಬಸ್ ನಿಲ್ದಾಣದ ಸ್ವಚ್ಛತೆ ನಿರ್ವಹಿಸಲು ಹಾಗೂ ಸಂಸ್ಥೆಯ ಸಿಬ್ಬಂದಿಗಳು ಸಾರ್ವಜನಿಕರೊಂದಿಗೆ ಉತ್ತಮ ರೀತಿಯಿಂದ ವರ್ತಿಸಲು ಸಹಕಾರಿಯಾಗುತ್ತದೆ.

# ಶ್ರೀ ದತ್ತಾವಧೂತರ ಶೋಭಾಯಾತ್ರೆ ಸಂಪನ್ನ



■ವಿಜಯಸಾಕ್ಷಿ ಸುದ್ದಿ, ನರೇಗಲ್ಲ

ಸಮೀಪದ ನಿಡಗುಂದಿ ಗ್ರಾಮದ ಸಂತೆ ಬಜಾರಿನ ಶ್ರೀ ಮಾರುತಿ ದೇವಸ್ಥಾನದಲ್ಲಿ ಮೇ 18ರಂದು ನಡೆಯಲಿರುವ 11 ಗಂಟೆಗಳ ಸಾಮೂಹಿಕ ಹನುಮಾನ ಚಾಲೀಸಾ ಪಠಣ ಕಾರ್ಯಕ್ರಮದ ನಿಮಿತ್ತ ಶ್ರೀ ಮಾರುತಿ, ಬ್ರಹ್ಮಚೈತನ್ಯ ಮಹಾರಾಜರ ಪಾದುಕೆ, ಹೆಬ್ಬಳ್ಳಿಯ ಚೈತನ್ಯಾಶ್ರಮದ ಪ.ಪೂ ದತ್ತಾವಧೂತ ಮಹಾರಾಜರ ಭವ್ಯ ಶೋಭಾಯಾತ್ರೆಯು ನೂರಾರು ಸದ್ಭಕ್ತರ ಸಮ್ಮುಖದಲ್ಲಿ ಅದ್ದೂರಿಯಾಗಿ ಜರುಗಿತು.

ಗ್ರಾಮದ ಭೀಮಾಂಬಿಕಾ ದೇವಸ್ಥಾನದಿಂದ ಪ್ರಾರಂಭವಾದ ಶೋಭಾಯಾತ್ರೆಯು ಗ್ರಾಮದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ ಸಂತೆ ಬಜಾರಿನ ಮಾರುತಿ ದೇವಸ್ಥಾನಕ್ಕೆ ತಲುಪಿತು. ಶೋಭಾಯಾತ್ರೆಯಲ್ಲಿ ಡೊಳ್ಳು, ಭಜನೆಯೊಂದಿಗೆ ಧೂಳಿ ಪಾದ ಪೂಜೆ, ಮಾರುತಿಗೆ ಆರುತಿ ಜರುಗಿತು.

ಶೋಭಾಯಾತ್ರೆಗೆ ದತ್ತಾತ್ರೇಯ ಹಾಗೂ ಲತಾ ಕುಲಕರ್ಣಿ ದಂಪತಿಗಳು ಪೂಜೆ ಸಲ್ಲಿಸಿ ಚಾಲನೆ ನೀಡಿದರು. ಈ ವೇಳೆ ರಂಗರಾವ್ ಕುಲಕರ್ಣಿ, ಡಾ. ವಿ.ಎಂ. ದೇಶಪಾಂಡೆ, ಎ.ಜಿ. ಕುಲಕರ್ಣಿ, ರವಿ ರಾಮದಾಸಿ, ಕುಮಾರಸ್ವಾಮಿ ಅವಧಾನಿ, ಆನಂದ ಕುಲಕರ್ಣಿ, ಭರತ ಕುಲಕರ್ಣಿ, ಭಗತ್ ಕುಲಕರ್ಣಿ, ಸಂತೋಷ ರಾಮದಾಸಿ, ವಿನಾಯಕ ಜೋಶಿ, ರವಿ ಈಚಲಕರಂಜಿ, ಜಗದೀಶ ಕರಡಿ, ಎ.ಎ. ಕುಲಕರ್ಣಿ, ಶ್ರೀಧರ ಕುಲಕರ್ಣಿ, ಕೃಷ್ಣಾ ಕೊಪ್ಪಳ, ದಿಲೀಪ ಆರ್ ಸೇರಿದಂತೆ ನರೇಗಲ್ಲ ಹಾಗೂ ಸುತ್ತಮುತ್ತಲಿನ ಗ್ರಾಮದ ಸದ್ಭಕ್ತರು, ಹೆಬ್ಬಳ್ಳಿ ಚೈತನ್ಯಾಶ್ರಮದವರು ಇದ್ದರು.

### ಯುವ ಕಾಂಗ್ರೆಸ್ ಘಟಕದಿಂದ ಭಾರತೀಯ ಸೈನಿಕರಿಗಾಗಿ ರಕ್ತದಾನ ಶಿಬಿರ

# ಸೈನಿಕರ ಬೆನ್ನಿಗೆ ದೇಶವೇ ನಿಂತಿದೆ

■ವಿಜಯಸಾಕ್ಷಿ ಸುದ್ದಿ, ಗದಗ

ಭಾರತ–ಪಾಕಿಸ್ತಾನ ನಡುವೆ ಈಗಾಗಲೇ ಸಂಘರ್ಷ ನಡೆದು ಕದನ ವಿರಾಮ ಘೋಷಣೆ ಮಾಡಲಾಗಿದೆ. ಈ ಹಿನ್ನೆಲೆಯಲ್ಲಿ ಗಡಿಯಲ್ಲಿ ನಿಂತು ಭಾರತವನ್ನು ರಕ್ಷಣೆ ಮಾಡಿದ ಸೈನಿಕರಿಗಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಘಟಕದಿಂದ ನಗರದ ಕಾಟನ್ ಸೇಲ್ ಸೊಸೈಟಿ ಆವರಣದಲ್ಲಿರುವ ಗದಗ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರಕ್ಕೆ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಸಚಿವ ಎಚ್.ಕೆ. ಪಾಟೀಲ, ಭಾರತ–ಪಾಕಿಸ್ತಾನ ನಡುವೆ ಈಗಾಗಲೇ ಯುದ್ಧ ನಡೆದು ಭಾರತೀಯ ಸೈನಿಕರು ಪಾಕಿಸ್ತಾನದ ಹಲವು ಏರ್ ಬೇಸ್‌ಗಳನ್ನು ಹಾಗೂ ಉಗ್ರರನ್ನು ಸದೆಬಡಿದಿದ್ದಾರೆ. ಭಾರತೀಯ ಸೈನಿಕರ ಧೈರ್ಯವನ್ನು ನಾವು ಮೆಚ್ಚಬೇಕು. ಅವರ ಪರವಾಗಿ ಇಡೀ ದೇಶವೇ ನಿಂತಿದ್ದು, ಸೈನಿಕರಿಗೋಸ್ಕರ ರಕ್ತದಾನ ಶಿಬಿರವನ್ನು ಆಯೋಜನೆ ಮಾಡಿರುವುದು ವಿನೂತನ ಕಾರ್ಯಕ್ರಮವಾಗಿದೆ ಎಂದರು.



ಜಿಲ್ಲಾ ಯುವ ಕಾಂಗ್ರೆಸ್ ಘಟಕದ ಅಧ್ಯಕ್ಷ ಕೃಷ್ಣಗೌಡ ಪಾಟೀಲ ಮಾತನಾಡಿ, ದಾನದಲ್ಲಿ ರಕ್ತದಾನ ಶ್ರೇಷ್ಠ ದಾನವಾಗಿದೆ. ರಕ್ತದಾನ ಮಾಡುವುದರಿಂದ ಮತ್ತೊಂದು ಜೀವಕ್ಕೆ ಮರುಜನ್ಮ ನೀಡಬಹುದು. ಪ್ರತಿಯೊಬ್ಬರೂ ರಕ್ತದಾನ ಶಿಬಿರದಲ್ಲಿ ಭಾಗವಹಿಸಿ ಜೀವ ಉಳಿಸಲು ಸಹಕರಿಸಬೇಕು. ಸೈನಿಕರಿಗೋಸ್ಕರ ರಕ್ತದಾನ ಶಿಬಿರ ಆಯೋಜನೆ ಮಾಡಲಾಗಿದ್ದು, ಸೈನಿಕರಿಗೆ ರಕ್ತದಾನ ಮಾಡುವುದರಿಂದ ದೇಶ ಸೇವೆಯಲ್ಲಿ ಪರೋಕ್ಷವಾಗಿ ಭಾಗವಹಿಸಿದಂತಾಗುತ್ತದೆ ಎಂದರು.

ಈ ವೇಳೆ ಹಿರಿಯ ಮುಖಂಡರಾದ ಗುರುರಾಜ ಬಳಗಾನೂರ, ಜಿ.ಪಂ ಮಾಜಿ ಅಧ್ಯಕ್ಷ ವಾಸಣ್ಣ ಕುರಡಗಿ, ಜಿಲ್ಲಾ ಗ್ಯಾರಂಟಿ ಅನುಷ್ಠಾನ ಸಮಿತಿ ಅಧ್ಯಕ್ಷ ಬಸವರಾಜ ಅಸೂಟಿ, ತಾಲೂಕಾ ಗ್ಯಾರಂಟಿ ಸಮಿತಿಯ ಅಧ್ಯಕ್ಷ ಅಶೋಕ ಮಂದಾಲಿ, ಮುಖಂಡರಾದ ಸಿದ್ದಲಿಂಗೇಶ ಪಾಟೀಲ, ಉಮರ್ ಫಾರೂಖ್ ಹುಬ್ಬಳ್ಳಿ, ಎಮ್.ಎನ್. ಶಾಲಗಾರ, ಸರ್ಫರಾಜ್, ಮಹಮ್ಮದ್ ಮುಂತಾದವರು ಉಪಸ್ಥಿತರಿದ್ದರು.

### ಕಸಾಪ ಲಕ್ಷ್ಮೇಶ್ವರ ಘಟಕದ ವತಿಯಿಂದ ದತ್ತಿ ಉಪನ್ಯಾಸ ಕಾರ್ಯಕ್ರಮ

# ಜೀವನದ ಉದ್ದೇಶವನ್ನು ಅರಿತುಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಇಂದಿನ ಒತ್ತಡದ ಜೀವನದಿಂದ ಪಾರಾಗಲು, ತನ್ನನ್ನು ತಾನು ಅರಿತುಕೊಳ್ಳಲು ಆಧ್ಯಾತ್ಮ ಅತ್ಯವಶ್ಯವಾಗಿದೆ. ಇದು ನಿತ್ಯ ನಿರಂತರ ಪ್ರಕ್ರಿಯೆ. ವಿದ್ಯಾರ್ಥಿಗಳು ಮುಖ್ಯವಾಗಿ ತಾನು ಯಾರು, ತನ್ನ ಜೀವನದ ಮುಖ್ಯ ಉದ್ದೇಶವೇನು ಎಂಬುದನ್ನು ಅರಿತುಕೊಳ್ಳಬೇಕು. ತನ್ನ ಅದ್ಭುತ ಸಾಮರ್ಥ್ಯದ ಸಂಪೂರ್ಣ ಸದುಪಯೋಗಪಡಿಸಿಕೊಳ್ಳಬೇಕು. ಅದನ್ನೇ ಆಧ್ಯಾತ್ಮ ತಿಳಿಸುತ್ತದೆ ಎಂದು ಸ್ಥಳೀಯ ಬಿ.ಇಡಿ ಮಹಾವಿದ್ಯಾಲಯದ ಪ್ರಾಚಾರ್ಯ ಆರ್.ಎಂ. ಅಂಗಡಿ ಅಭಿಪ್ರಾಯಪಟ್ಟರು.

ಅವರು ಶನಿವಾರ ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನ ವತಿಯಿಂದ ಶ್ರೀ ತಾ.ಪಾ.ಮ.ಬ ಮಹಿಳಾ ಪದವಿ ಕಾಲೇಜಿನಲ್ಲಿ ಹಮ್ಮಿಕೊಂಡ ಎಂ.ಜಿ. ಮಹಾಂತಶೆಟ್ಟರ ಹಾಗೂ ಶ್ರೀಮತಿ ಜಯಲಕ್ಷ್ಮೀ ಗ. ಗಡ್ಡದೇವರಮಠ ನೀಡಿದ ದತ್ತಿ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡಿ ಮಾತನಾಡಿದರು.

ಆಧ್ಯಾತ್ಮದಿಂದ ಮನಸ್ಸಿನ ನೆಮ್ಮದಿ ಪಡೆದುಕೊಳ್ಳಲು ಸಾಧ್ಯವಾಗುತ್ತದೆ. ಆದರೆ ಪಾಶ್ಚಿಮಾತ್ಯದ ಆಕರ್ಷಣೆಗೊಳಗಾಗಿ ನಮ್ಮ ಆಚರಣೆ, ಸಂಪ್ರದಾಯ, ಸಂಸ್ಕೃತಿಗಳಿಂದ ದೂರವಾಗುತ್ತಿದ್ದೇವೆ. ನಮ್ಮ ಸಂಸ್ಕೃತಿ, ಸಂಪ್ರದಾಯಗಳು ನಮ್ಮ ಹೆಮ್ಮೆ. ಅವುಗಳನ್ನು ಅಳವಡಿಸಿಕೊಂಡಲ್ಲಿ ಜೀವನದಲ್ಲಿ ಯಶಸ್ಸು ಸಾಧಿಸಲು ಸಹಾಯವಾಗುತ್ತದೆ ಎಂದು ಹೇಳಿದರು.

ಅಂಚೆ ಸಹಾಯಕ ಹಾಗೂ ಸಾಹಿತಿ ಸುರೇಶ ತಂಗೋಡ ಮಾತನಾಡಿ, ನಿಸ್ವಾರ್ಥ ಸೇವೆಯ ಬಗ್ಗೆ ನಾವು ಕೇವಲ ದೊಡ್ಡವರ ದೊಡ್ಡ ಉದಾಹರಣೆಗಳನ್ನು ನೀಡುವುದಲ್ಲ. ಬದಲಾಗಿ ನಮ್ಮ ನಿತ್ಯ ಜೀವನದ ಸಣ್ಣ ಸಣ್ಣ ಹೆಜ್ಜೆಗಳಲ್ಲೂ ನಿಸ್ವಾರ್ಥತೆಯನ್ನು ಕಂಡುಕೊಳ್ಳಬಹುದು. ಆ ಮೂಲಕ ಸಮಾಜದ ಶ್ರೇಯಸ್ಸನ್ನು ಸಾಧಿಸಬಹುದು ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಕ.ಸಾ.ಪ ತಾಲೂಕಾಧ್ಯಕ್ಷ ಈಶ್ವರ ಮೆಡ್ಲೇರಿ, ದತ್ತಿ ದಾನಿಗಳು ಕನ್ನಡ ಸಾಹಿತ್ಯ ಪರಿಷತ್ತಿನ ಜೀವನಾಡಿಯಿದ್ದಂತೆ. ಇಂತಹ ದತ್ತಿ ಉಪನ್ಯಾಸಗಳ ಮೂಲಕ ಇಂದು ಸಾಹಿತ್ಯ ಪರಿಷತ್ತು ನೂರಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುತ್ತಿದೆ ಎಂದರು.

ಶ್ರೀ ತಾ.ಪಾ.ಮ.ಬ ಮಹಿಳಾ ಕಲಾ ಮತ್ತು ವಾಣಿಜ್ಯ ಪದವಿ ಕಾಲೇಜಿನ ವಿದ್ಯಾರ್ಥಿನಿಯರು ಪ್ರಾರ್ಥನೆ ಹಾಗೂ ನಾಡಗೀತೆ ಹಾಡಿದರು. ಕ.ಸಾ.ಪ ಸಂಘಟನಾ ಕಾರ್ಯದರ್ಶಿ ನಾಗರಾಜ ಮಜ್ಜಿಗುಡ್ಡ ಸ್ವಾಗತಿಸಿದರು. ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ನಿರೂಪಿಸಿದರು. ಪದಾಧಿಕಾರಿ ತಮ್ಮನಗೌಡ ಪಾಟೀಲ ವಂದಿಸಿದರು. ವಿಶ್ರಾಂತ ಶಿಕ್ಷಕ ವಿ.ಎಂ. ಹೂಗಾರ ಗೀತ ಗಾಯನ ನಡೆಸಿಕೊಟ್ಟರು. ಕಾರ್ಯಕ್ರಮದಲ್ಲಿ ಉಪನ್ಯಾಸಕರಾದ ರವಿಕುಮಾರ ನೀರಲಗಿ, ಸುಧಾ ಉಕ್ಕಲಿ, ಮಾಲಾಶ್ರೀ ಹುಳ್ಳಿಕೊಪ್ಪಿ ಮುಂತಾದವರು ಉಪಸ್ಥಿತರಿದ್ದರು.




> ಕಾರ್ಯಕ್ರಮ ಉದ್ಘಾಟಿಸಿದ ಕಾಲೇಜಿನ ಪ್ರಾಚಾರ್ಯ ವಿಜಯಕುಮಾರ ಬಿಳೆಯಲಿ ಮಾತನಾಡಿ, ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ಕನ್ನಡದ ಜಾಗೃತಿ ನಿತ್ಯ ನಿರಂತರವಾಗಿ ಸಾಗಿದೆ. ಅದರಲ್ಲೂ ಶಾಲಾ–ಕಾಲೇಜುಗಳಲ್ಲಿ ಕ.ಸಾ.ಪ ಘಟಕ ಸ್ಥಾಪಿಸಿ ಯುವ ಮನಗಳಲ್ಲಿ ಕನ್ನಡತನದ ಅಭಿಮಾನ ಮೂಡಿಸುತ್ತಿರುವದು ಶ್ಲಾಘನೀಯ ಹಾಗೂ ಮಾದರಿ ಕಾರ್ಯ ಎಂದು ಅಭಿಪ್ರಾಯಪಟ್ಟರು.

# ವಸತಿ ನಿಲಯ ಪ್ರವೇಶಕ್ಕೆ ಅರ್ಜಿ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

2025 – 26ನೇ ಸಾಲಿನಲ್ಲಿ ಗದಗ ಜಿಲ್ಲೆಯ ಮುಂಡರಗಿ ಪಟ್ಟಣದಲ್ಲಿ ಕಾರ್ಯನಿರ್ವಹಿಸುತ್ತಿರುವ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯಕ್ಕೆ ಪ್ರವೇಶಕ್ಕಾಗಿ ಎಸ್‌ಎಚ್‌ಪಿ (ಸ್ಟೇಟ್ ಹಾಸ್ಟೆಲ್ ಪೋರ್ಟಲ್ ) ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯದ ಪ್ರವೇಶಾತಿ ಸೇವೆಯನ್ನು ವೆಬ್‌ಸೈಟ್ ವಿಳಾಸ https/. shp.karnataka.gov.in/ ಮೂಲಕ ಜೂನ್ 25 ರೊಳಗಾಗಿ ಆನ್‌ಲೈನ್ ಅರ್ಜಿಗಳನ್ನು ಸಲ್ಲಿಸಿ ಅರ್ಜಿ ಪ್ರತಿ ಹಾಗೂ ಎಲ್ಲಾ ದಾಖಲೆಗಳನ್ನು ಸಂಬಂಧಿಸಿದ ವಸತಿ ನಿಲಯಕ್ಕೆ ನೀಡಬೇಕು.

ವಸತಿ ನಿಲಯಗಳಲ್ಲಿ 75% ಅಲ್ಪಸಂಖ್ಯಾತರ ವಿದ್ಯಾರ್ಥಿಗಳಿಗೆ ಮತ್ತು 25 % ಇತರೆ ವರ್ಗದವರಿಗೆ ಮೀಸಲಿಡಲಾಗಿದೆ. ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು 2.50 ಲಕ್ಷ ರೂ.ಗಳಿಗಿಂತ ಮೀರಿರಬಾರದು. ಅರ್ಜಿಯೊಂದಿಗೆ ತಹಸೀಲ್ದಾರ ನೀಡಿದ ಜಾತಿ ಮತ್ತು ಆದಾಯ ದೃಢೀಕರಣ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ, ಆಧಾರ್ ಕಾರ್ಡ್, ಅಂಕಪಟ್ಟಿ ಹಾಗೂ ವಿದ್ಯಾರ್ಥಿ ಪಾಸ್ ಪೋರ್ಟ್ ಅಳತೆಯ ಇತ್ತೀಚಿನ 4 ಭಾವಚಿತ್ರಗಳೊಂದಿಗೆ ಮತ್ತು ನಿಗದಿ ಪಡಿಸಿದ ದಿನಾಂಕದೊಳಗಾಗಿ ಅರ್ಜಿಯನ್ನು ಸಲ್ಲಿಸುವುದು.

ಹೆಚ್ಚಿನ ಮಾಹಿತಿಗಾಗಿ ತಾಲೂಕು ಅಲ್ಪಸಂಖ್ಯಾತರ ಮಾಹಿತಿ ಕೇಂದ್ರ ಮುಂಡರಗಿ ಅಥವಾ ಅಲ್ಪಸಂಖ್ಯಾತರ ಮೆಟ್ರಿಕ್ ಪೂರ್ವ ಬಾಲಕಿಯರ ವಸತಿ ನಿಲಯ, ಮುಂಡರಗಿಗೆ ಭೇಟಿ ನೀಡಿ ಸಂಪರ್ಕಿಸಬಹುದಾಗಿದೆ.

# ಕೆರೆಗಳ ಮೀನು ಪಾಶುವಾರು ಹಕ್ಕು ವಿಲೇವಾರಿಗೆ ಪ್ರಸ್ತಾವನೆ ಆಹ್ವಾನ

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲೆಯ ಅರ್ಹ ಆಸಕ್ತ ಮೀನುಗಾರಿಕೆ ಸಹಕಾರಿ ಸಂಘಗಳು/ ಮೀನುಗಾರಿಕೆ ಇಲಾಖೆಯಿಂದ ಅನುಮತಿಸಲಾದ ರೈತ ಮೀನುಗಾರರ ಉತ್ಪಾದಕ ಸಂಸ್ಥೆಗಳಿಂದ ಮಾತ್ರ ತಮ್ಮ ಕಾರ್ಯ ವ್ಯಾಪ್ತಿಯಲ್ಲಿನ ಮುಂಡರಗಿ ತಾಲೂಕಿನ ಚಿಕ್ಕವಡ್ಡಟ್ಟಿ ಕೆರೆ, ಮುರಡಿ ಕೆರೆ, ಕೇಲೂರು ಕೆರೆ ; ಶಿರಹಟ್ಟಿ ತಾಲೂಕಿನ ಕಡಕೋಳ ಕೆರೆ, ಜಲ್ಲಿಗೇರಿ ಕೆರೆ ; ಲಕ್ಷ್ಮೇಶ್ವರ ತಾಲೂಕಿನ ಪೇಠಬಣ ಕೆರೆಗಳ ಮೀನು ಪಾಶುವಾರು ಹಕ್ಕನ್ನು 2025–26ನೇ ಮೀನುಗಾರಿಕೆ ಫಸಲಿನ ವರ್ಷದಿಂದ (1–7–2025 ) ರಿಂದ 2029–30 ( 30–6–2030 ) ನೇ 5 ವರ್ಷಗಳ ಅವಧಿಗೆ ಗುತ್ತಿಗೆ ಮೂಲಕ ನೀಡಲು ಪ್ರಸ್ತಾವನೆ ಆಹ್ವಾನಿಸಲಾಗಿದೆ.

ಸರ್ಕಾರದ ಆದೇಶದ ಗುತ್ತಿಗೆ ನಿಯಮ ಮತ್ತು ಷರತ್ತುಗಳನ್ವಯ ಅಗತ್ಯ ದಾಖಲಾತಿಗಳೊಂದಿಗೆ ಮೇ 29 ರೊಳಗೆ ಸಂಬಂಧಿಸಿದ ತಾಲೂಕಿನ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಚೇರಿ, ಮುಂಡರಗಿ ಇಲ್ಲಿ ಪ್ರಸ್ತಾವನೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಮುಂಡರಗಿ ಮೀನುಗಾರಿಕೆ ಸಹಾಯಕ ನಿರ್ದೇಶಕರ ಕಾರ್ಯಾಲಯ, ಹುಡ್ಕೋ ಕಾಲೋನಿ ಹತ್ತಿರ, ಕೊಪ್ಪಳ ರೋಡ್, ಮುಂಡರಗಿ ಇಲ್ಲಿ ಸಂಪರ್ಕಿಸಬಹುದಾಗಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka